ವಿಜಯಪುರ । ಸಂಪುಟ 01 । ಸಂಚಿಕೆ 236 । ಪುಟ 4 । ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com Title Code: KARKAN28047 ಶನಿವಾರ, ನವೆಂಬರ್ 11, 2023

"ಟಿಪ್ಪು ಸುಲ್ತಾನ ತಮ್ಮ ಮಕ್ಕಳನ್ನೆ ಒತ್ತೆ ಇಟ್ಟು ದೇಶದ ರಕ್ಷಣೆ ಮಾಡಿದ. ಆದರೆ ಕೆಲ ದೇಶದ್ರೋಹಿಗಳು ಟಿಪ್ಪು ಕುರಿತು ಟೀಕೆ ಮಾಡುತ್ತಿದ್ದಾರೆ. ಇದು ಸರಿಯಲ್ಲ. ಟಿಪ್ಪು ಹಿಂದು ಮಂದಿರಗಳ ರಕ್ಷಣೆಗೆ ಶ್ರಮಿಸಿದ್ದಾರೆ. ಇವರು ಸರ್ವ ಧರ್ಮದವರಿಗೂ ಆದರ್ಶ."



– ಹಮೀದ್ ಮುಶ್ರೀಫ್
ಕೆ.ಪಿ.ಸಿ.ಸಿ. ಸದಸ್ಯರು

ಬಿಎಸ್ವೈ ಪುತ್ರಗೊಲಿದ ಅದೃಷ್ಟ । ಲಿಂಗಾಯತ ವೋಟ್ ಬ್ಯಾಂಕಿನತ್ತ ಗಮನ । ಯಡಿಯೂರಪ್ಪ ಪ್ರಭಾವ ಮನಗಂಡ ಹೈಕಮಾಂಡ್

# ಬಿಜೆಪಿಯ ನೂತನ ಸಾರಥಿಯಾಗಿ ಬಿ.ವೈ.ವಿಜಯೇಂದ್ರ!

ಬೆಂಗಳೂರು: ಅಂತೂ ಇಂತೂ ಕೊನೆಗೂ ಬಿಜೆಪಿ ಕರ್ನಾಟಕಕ್ಕೆ ನೂತನ ರಾಜ್ಯಾಧ್ಯಕ್ಷರನ್ನು ನೇಮಕ ಮಾಡಿದೆ. ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಅವರ ಪುತ್ರ, ಶಿಕಾರಿಪುರ ಕ್ಷೇತ್ರದ ಶಾಸಕ ಬಿ.ವೈ. ವಿಜಯೇಂದ್ರ ಬಿಜೆಪಿ ರಾಜ್ಯಾಧ್ಯಕ್ಷರಾಗಿ ನೇಮಕವಾಗಿದ್ದಾರೆ.

ಕೂಡಲೇ ಜಾರಿಗೆ ಬರುವಂತೆ ಬಿ.ವೈ. ವಿಜಯೇಂದ್ರ ಅವರನ್ನು ರಾಜ್ಯ



ಬಿಜೆಪಿಯ ನೂತನ ಸಾರಥಿಯನ್ನಾಗಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ. ಪಿ. ನಡ್ಡಾ ನೇಮಿಸಿದ್ದಾರೆ. ಈ ಕುರಿತು ಬಿಜೆಪಿ ಪ್ರಧಾನ ಕಾರ್ಯದರ್ಶಿ ಅರುಣ್ ಸಿಂಗ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಧಾನಸಭಾ ಚುನಾವಣೆ ಸೋಲಿನ ಹೊಣೆ ಹೊತ್ತು ನಳೀನ್ ಕುಮಾರ್ ಕಟೀಲ್ ರಾಜೀನಾಮೆ ನೀಡಿದ ಬಳಿಕ ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನ ಖಾಲಿ ಬಿದ್ದಿತ್ತು. ಈ ಸ್ಥಾನಕ್ಕೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಸಿ.ಟಿ. ರವಿ ಮತ್ತಿತರ ಹೆಸರುಗಳು ಕೇಳಿಬರುತಿತ್ತು.

ಆದರೆ, ಸಕ್ರಿಯ ರಾಜಕಾರಣದಿಂದ ದೂರ ಉಳಿದಿದ್ದರೂ ರಾಜ್ಯ ರಾಜಕೀಯದಲ್ಲಿ ಲಿಂಗಾಯತ ಪ್ರಬಲ ನಾಯಕ ಬಿಎಸ್ ಯಡಿಯೂರಪ್ಪ ಪ್ರಭಾವವನ್ನು ಮನಗಂಡ ಹೈಕಮಾಂಡ್ , ಕೊನೆಗೂ ಅವರ ಪುತ್ರ ಬಿ.ವೈ. ವಿಜಯೇಂದ್ರ ಅವರನ್ನು ರಾಜ್ಯ ಬಿಜೆಪಿಯ ನೂತನ ಅಧ್ಯಕ್ಷರಾಗಿ ನೇಮಿಸಲಾಗಿದೆ. ಈ ಮೂಲಕ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಲಿಂಗಾಯತ ವೋಟ್ ಬ್ಯಾಂಕಿನತ್ತ ಗಮನ ಕೇಂದ್ರೀಕರಿಸಿದೆ.

## ಲೋಕಸಭೆ ಚುನಾವಣೆ ಸವಾಲಾಗಿ ಸ್ವೀಕಾರ :ವಿಜಯೇಂದ್ರ

ಬೆಂಗಳೂರು: ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಅವರ ಪುತ್ರ, ಬಿಜೆಪಿ ಶಾಸಕ ಬಿವೈ ವಿಜಯೇಂದ್ರ ಅವರು ತಮ್ಮನ್ನು ಬಿಜೆಪಿ ರಾಜ್ಯಾಧ್ಯಕ್ಷರಾಗಿ ಆಯ್ಕೆ ಮಾಡಿದ್ದಕ್ಕೆ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಬಿಜೆಪಿ ಅಧ್ಯಕ್ಷ ಜೆ.ಪಿ ನಡ್ಡಾ ಹಾಗೂ ಬಿಜೆಪಿ ನಾಯಕ ಬಿ.ಎಲ್ ಸಂತೋಷ್ ಅವರಿಗೆ ಧನ್ಯವಾದ ತಿಳಿಸಿದ್ದಾರೆ.

ಬಿಜೆಪಿ ನೂತನ ರಾಜ್ಯಾಧ್ಯಕ್ಷರಾಗಿ ನೇಮಕವಾದ ನಂತರ ಟ್ವೀಟ್ ಮಾಡಿರುವ ವಿಜಯೇಂದ್ರ ಅವರು, ಅಚಲ ವಿಶ್ವಾಸವಿಟ್ಟು ಪಕ್ಷ ಸಂಘಟನೆಯ ಬಹು ದೊಡ್ಡ ಜವಾಬ್ದಾರಿ ವಹಿಸಿದ ಪ್ರಧಾನಿ ನರೇಂದ್ರ ಮೋದಿ, ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಗೃಹ ಸಚಿವ ಅಮಿತ್ ಶಾ ಹಾಗೂ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿಗಳಾದ ಬಿ.ಎಲ್ ಸಂತೋಷ್ ಅವರಿಗೆ ತುಂಬು ಹೃದಯದ ಕೃತಜ್ಞತೆಗಳನ್ನು ಅರ್ಪಿಸಿದ್ದಾರೆ.

ಸಂಘದ ಹಾಗೂ ಪಕ್ಷದ ಹಿರಿಯರ ಮಾರ್ಗದರ್ಶನದಲ್ಲಿ ಸರ್ವರ ನಿರೀಕ್ಷೆ ಹಾಗೂ ಜನರ ಅಪೇಕ್ಷೆಗೆ ಪೂರಕವಾಗಿ ರಾಜ್ಯದಲ್ಲಿ ಭಾರತೀಯ ಜನತಾ ಪಾರ್ಟಿಗೆ ಹೊಸ ಚೈತನ್ಯ ತುಂಬಲು ಕಾರ್ಯಕರ್ತರೊಂದಿಗೆ ಕಾರ್ಯಕರ್ತನಾಗಿ ಅಹರ್ನಿಶಿ ದುಡಿಯುವ ಸಂಕಲ್ಪ ತೊಟ್ಟಿರುವೆ. ನಾಡಿನ ಜನರ ಆಶೀರ್ವಾದವೇ ನನಗೆ ಶ್ರೀರಕ್ಷೆ ಎಂದು ವಿಜಯೇಂದ್ರ ಹೇಳಿದ್ದಾರೆ.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ವಿಜಯೇಂದ್ರ ಅವರು, ಹೈಕಮಾಂಡ್ ನನ್ನ



ಮೇಲೆ ವಿಶ್ವಾಸವಿಟ್ಟಿದ್ದಕ್ಕೆ ಧನ್ಯವಾದ ಹೇಳುತ್ತೇನೆ. ನನ್ನ ಮುಂದೆ ಲೋಕಸಭೆ ಚುನಾವಣೆ ಇದೆ. ಅದನ್ನು ಸವಾಲಾಗಿ ಸ್ವೀಕರಿಸುತ್ತೇನೆ. ರಾಜ್ಯಾದ್ಯಂತ ಪ್ರವಾಸ ಮಾಡುತ್ತೇನೆ. ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವುದಾಗಿ ಹೇಳಿದ್ದಾರೆ.


## ರಾಜ ನುಡಿ

ಭೂಮಿಯ ಮೇಲೆ ನಿಂತು ಜೀವನವಿಡಿ ನೋಡಿದರೂ ಚಂದ್ರನ ಒಂದೇ ಮೇಲ್ಮ ನಮಗೆ ಕಾಣುತ್ತದೆ. ಇನ್ನೊಂದು ಮೇ ಕಾಣಲು ಭೂಮಿಯಿಂದಾಚೆ ಬರಲೇಬೇಕು.

ಜೀವನವನ್ನು ನೋಡುವ ದೃಷ್ಟಿಕೋನ ಬದಲಾಯಿಸದ ಹೊರತೂ ಜೀವನದ ಇನ್ನೊಂದು ಮಗ್ಗಲು ನಮಗೆ ಖಂಡಿತ ಕಾಣಲಾರದು..

–ಡಾ. ರಾಜಶೇಖರ ನಾಗೂರ

## ವಚನ ಚಿಂತನ 232



### ಅಂದಿನ ಶರಣರ ಲಿಂಗಜ್ಞಾನ, ಇಂದಿನ ಖಗೋಳ ವಿಜ್ಞಾನ

*ಅಮಲಬ್ರಹ್ಮದಲ್ಲಿ ಸಕಲ ಬ್ರಹ್ಮಾಂಡಂಗಳು ಅಡಗಿಪ್ಪವಯ್ಯ.*
*ಆ ಸಕಲ ಬ್ರಹ್ಮಾಂಡಕೆ ಒಂದೇ ಲಿಂಗ ನೋಡಾ!*
*ಆ ಲಿಂಗವನು ಮಹಾಜ್ಞಾನದಿಂದ ತಿಳಿದು ಪರಿಣಾಮಿಸಬಲ್ಲ ಹಿರಿಯರ ತೋರಿಸಯ್ಯ ಝೇಂಕಾರ ನಿಜಲಿಂಗಪ್ರಭುವೆ.*

*– ಜಕ್ಕಯ್ಯನವರು*

ಶರಣರ ಖಗೋಳ ಜ್ಞಾನ ಅಪಾರವಾದದ್ದು, 18ನೇ ಶತಮಾನದ ಅಂತ್ಯದಲ್ಲಿ ಯುರೋಪಿನ ಕೆಲವು ಖಗೋಳವಿಜ್ಞಾನಿಗಳು ಆಗಸದ ವಿಸ್ಮಯಗಳನ್ನು ತಮ್ಮ ದೂರದರ್ಶಕದ ಮೂಲಕ ನೋಡಿ ಅರಿತ ಅವರ ಅರಿವಿಗೆ ಸಮನಾದ ಜ್ಞಾನವನ್ನು ನಾವು 12ನೇ ಶತಮಾನದ ಶರಣರ ವಚನಗಳಲ್ಲಿ ಕಾಣುತ್ತೇವೆ, ಮೇಲಿನ ವಚನದಲ್ಲಿ ಜಕ್ಕಣ್ಣಯ್ಯನವರು ಬ್ರಹ್ಮಾಂಡದ ಸ್ವರೂಪವನ್ನು ವಿವರಿಸುತ್ತ ಅಮಲಬ್ರಹ್ಮದಲ್ಲಿ ಸಕಲ ಬ್ರಹ್ಮಾಂಡಂಗಳು ಅಡಗಿಪ್ಪವಯ್ಯ ಎಂದಿರುವರು. ಇಂದು ಖಗೋಳವಿಜ್ಞಾನಿಗಳು ಹೇಳುವ ಬ್ರಹ್ಮಾಂಡದೊಳಗಿನ ಅಸಂಖ್ಯಾತ ಗ್ಯಾಲಾಕ್ಷಿಗಳು ಅಗೋಚರ ಕಾಸ್ಮಿಕ್ ಶಕ್ತಿ ವಲಯದಲ್ಲಿ ತೇಲುತ್ತಿವೆ ಎಂಬ ಅಭಿಪ್ರಾಯಕ್ಕೆ ಸರಿಹೊಂದುತ್ತದೆ, ಆ ಸಕಲ ಬ್ರಹ್ಮಾಂಡಕೆ ಒಂದೇ ಲಿಂಗ ನೋಡಾ! ಎಂಬುದು ಸುಮಾರು 13 ಬಿಲಿಯನ್ ವರ್ಷಗಳ ಹಿಂದೆ ಈ ಸೃಷ್ಟಿಯ ಉಗಮಕ್ಕೆ ಕಾರಣವಾದ ಆ ಒಂದು ಆದಿಮೂಲ ಪರಮಾಣುವಿನಿಂದ ಉಂಟಾದ "ಮಹಾಸ್ಫೋಟ ಃಬಿಉ–ಃಂಓಉ" ನ್ನು ಸೂಚಿಸುವಂತಿದೆ. ಆ ಆದಿಮೂಲ ಪರಮಾಣುವಿನ ಮೂಲವನ್ನು ಇಲ್ಲಿಯವರೆಗೆ ವಿಜ್ಞಾನಿಗಳಿಗೆ ಕಂಡುಕೊಳ್ಳಲು ಸಾದ್ಯವಾಗಿಲ್ಲ. ಆ ಲಿಂಗವನು ಮಹಾಜ್ಞಾನದಿಂದ ತಿಳಿದು ಪರಿಣಾಮಿಸಬಲ್ಲ ಹಿರಿಯರ ತೋರಿಸಯ್ಯಝೇಂಕಾರ ನಿಜಲಿಂಗಪ್ರಭುವೆ. ಎನ್ನುವಲ್ಲಿ, ಶರಣರು ಆ ಆದಿಮೂಲ ಪರಮಾಣುವಿನ ಮೂಲವನ್ನೆ ಅರಿತು ಅದನ್ನು ಮಹಾಲಿಂಗವೆಂದು ಕರೆದಿರುವರು, ಅದರ ಕುರುಹುವನ್ನು ಇಷ್ಟಲಿಂಗದ ರೂಪದಲ್ಲಿ ಕೈಗೆ ನೀಡಿದ್ದಾರೆ. ಈ ಸೃಷ್ಟಿಯ ಎಲ್ಲ ಚರಾಚರದ ಚೈತನ್ಯಕ್ಕೆ ಕಾರಣವೇ ಅದು ಎಂದಿರುವರು. ಶರಣರ ಅಂದಿನ ಲಿಂಗಜ್ಞಾನವೇ ಇಂದಿನ ಖಗೋಳಜ್ಞಾನ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ಬಸವನಬಾಗೇವಾಡಿಯಲ್ಲಿ ದೀಪಾವಳಿ ಹಬ್ಬಕ್ಕೆ ಭರದ ಸಿದ್ದತೆ

ಉದಯರಶ್ಮಿ ನ್ಯೂಸ್

- ಸುಮಂಗಲಾ ಹುದ್ದಾರ

ಬಸವನಬಾಗೇವಾಡಿ: ಮುಂಗಾರು–ಹಿಂಗಾರು ಮಳೆ ಸರಿಯಾಗಿ ಬಾರದೇ ಇರುವದ–ರಿಂದ ಬರದ ಛಾಯೆಯಲ್ಲಿಯೇ ಬೆಳಕಿನ ಹಬ್ಬ ದೀಪಾವಳಿಯನ್ನು ಸಂಭ್ರಮದಿಂದ ಆಚರಿಸಲು ಪಟ್ಟಣ ಸೇರಿದಂತೆ ತಾಲೂಕಿನಲ್ಲಿ ಜನರು ಭರದಿಂದ ಸಿದ್ದತೆಗಳನ್ನು ಮಾಡಿಕೊಳ್ಳುತ್ತಿದ್ದಾರೆ. ಪಟ್ಟಣದಲ್ಲಿ ಕೆಲ ದಿನಗಳಿಂದ ಮಾರುಕಟ್ಟೆಯಲ್ಲಿ ಹಬ್ಬಕ್ಕೆ ಹೊಸ ಬಟ್ಟೆ, ಸೀರೆ ಖರೀದಿಗೆ ಹೆಚ್ಚಿನ ಸಂಖ್ಯೆಯಲ್ಲಿ ಜನರು ಬಟ್ಟೆ ಅಂಗಡಿಗಳಲ್ಲಿ ಕಂಡು ಬರುತ್ತಿದ್ದಾರೆ. ದೀಪಾವಳಿ ಹಬ್ಬ ಶನಿವಾರದಿಂದ ಆರಂಭವಾಗುತ್ತಿರುವುದರಿಂದಾಗಿ ಶುಕ್ರವಾರ ಬಟ್ಟೆ ಅಂಗಡಿ ಸೇರಿದಂತೆ ಹಬ್ಬಕ್ಕೆ ಬೇಕಾದ ಸಾಮಗ್ರಿಗಳನ್ನು ಖರೀದಿಸಲು ವಿವಿಧೆಡೆಗಳಿಂದ ಹೆಚ್ಚು ಜನರು ಆಗಮಿಸಿದ್ದು ಕಂಡು ಬಂತು.

ದೀಪಾವಳಿ ಹಬ್ಬಕ್ಕೆ ಬೇಕಾದ ಪೂಜಾ ಸಾಮಗ್ರಿಗಳು, ಆಕಾಶ ಬುಟ್ಟಿ, ಹೊಸ ಬಟ್ಟೆ ಸೇ–ರಿದಂತೆ ಇನ್ನೀತರ ವಸ್ತುಗಳನ್ನು ಖರೀದಿಸುವಲ್ಲಿ ಜನರು ತುಂಬಾ ಬ್ಯುಸಿಯಾಗಿದ್ದಾರೆ. ದೀಪಾವಳಿ ಹಬ್ಬವನ್ನು ಎಲ್ಲ ಜನರು ಆಚ–ರಿಸಲು ಸಿದ್ದಗೊಳ್ಳುತ್ತಿದ್ದಾರೆ. ವರ್ಷಕ್ಕೊಮ್ಮೆ ಬರುವ ಈ ಹಬ್ಬವನ್ನು ಸಂಭ್ರಮ, ಸಡಗರದಿಂದ ಆಚರಿಸಲು ಕಳೆದ ಹಲವು ದಿನಗಳಿಂದಲೇ ಜನರು ತಮ್ಮ ಮನೆ, ಅಂಗಡಿ–ಮುಂಗಟ್ಟುಗಳ ಸ್ವಚ್ಛತಾ ಕಾರ್ಯದಲ್ಲಿ ತೊಡಗಿದ್ದಾರೆ. ಸಂಭ್ರಮದ ದೀಪಾವಳಿ ಹಬ್ಬಕ್ಕೆ ಕ್ಷಣ ಗಣನೆ ಆರಂಭವಾಗಿದೆ.



ವಾಹನ ಹೊಂದಿರುವ ಮಾಲೀಕರು ತಮ್ಮ ವಾಹನಗಳಿಗೆ ಬಣ್ಣ, ತಹರೇವಾರಿ ಹೂ ಸೇರಿದಂತೆ ಅಲಂಕಾರಿಕ ವಸ್ತುಗಳನ್ನು ಖರೀದಿಸುವಲ್ಲಿ ನಿರತರಾಗಿದ್ದರು. ಗ್ಯಾರೇಜುಗಳಲ್ಲಿಯೂ ವಾಹನಗಳಿಗೆ ಹಬ್ಬಕ್ಕಾಗಿ ತಯಾರಿ ಮಾಡಿಸುವುದು ಕಂಡುಬಂದಿತ್ತು.

ಶನಿವಾರ ನೀರು ತುಂಬುವ ಹಬ್ಬದಿಂದ ಆರಂಭವಾಗುವ ದೀಪಾವಳಿ ಹಬ್ಬ ಐದು ದಿನಗಳ ಕಾಲ ನಡೆಯಲಿದೆ. ಭಾನುವಾರ ಬೆಳಗ್ಗೆ ನರಕ ಚತುರ್ದಶಿ ಮೂಹರ್ತ ಇರುವದ–ರಿಂದಾಗಿ ಬೆಳಗ್ಗೆ ಬೇಗನೆ ಎದ್ದು ಮಕ್ಕಳು, ಪುರುಷರು ಎಣ್ಣೆ ಹಚ್ಚಿಕೊಂಡು ಸ್ನಾನ ಮಾಡಿ ಹೆಣ್ಣುಮಕ್ಕಳಿಂದ ಆರತಿ ಮಾಡಿಸಿಕೊಳ್ಳುತ್ತಾರೆ. ಈ ಸಲ ದೀಪಾವಳಿ ಅಮವಾಸ್ಯೆ ಭಾನುವಾರ ಮಧ್ಯಾನ್ಹ ಆರಂಭವಾಗಿ ಸೋಮವಾರ ಮಧ್ಯಾನ್ಹವರೆಗೆ ಇರುವದರಿಂದಾಗಿ ಕೆಲವೆಡೆ ಭಾನುವಾರ, ಕೆಲವೆಡೆ ಸೋಮವಾರ ದೀಪಾವಳಿ ಅಮವಾಸ್ಯೆ ಮಾಡುತ್ತಾರೆ ಎಂಬ ಮಾತು ಕೇಳಿ ಬರುತ್ತಿದೆ. ಮಂಗಳವಾರ ಬಲಿಪಾಡ್ಯಮಿ ಇದೆ. ದೀಪಾವಳಿ ಹಬ್ಬದಲ್ಲಿ ಬಗೆ ಬಗೆಯ ಸಿಹಿ ತಿನಿಸುಗಳನ್ನು ಜನರು ಸವಿಯುತ್ತಾರೆ.

ದೀಪಾವಳಿ ಹಬ್ಬದ ಲಕ್ಷ್ಮೀ ಪೂಜೆ ವಿಶೇಷವಾಗಿ ಚೆಂಡು ಹೂ ಸೇ–ರಿದಂತೆ ವಿವಿಧ ತರಹದ ಹೂಗಳು ಮಾರುಕಟ್ಟೆ ಬರುತ್ತವೆ. ಚೆಂಡು ಹೂ ಈ ಸಲ ಸರಿಯಾಗಿ ಮಳೆ ಬಾರದೇ ಇರುವದರಿಂದಾಗಿ ಇದರ ಬೆಲೆ ದುಬಾರಿಯಾಗುವ ಸಾಧ್ಯತೆಯಿದೆ. ಉಳಿದ ಹೂಗಳು ತುಟ್ಟಿಯಾಗುವ ಸಾಧ್ಯತೆಯಿದೆ. ಹಣ್ಣು–ಹಂಪಲ ದರವೂ ಜಾಸ್ತಿಯಾಗಬಹುದು. ಅಂಗಡಿಗಳಲ್ಲಿ ತಹರೇವಾರಿ ಆಕಾಶಬುಟ್ಟಿಗಳು ಮಾರಾಟಕ್ಕೆ ಬಂದಿವೆ. ಆಕಾಶ ಬುಟ್ಟಿಗಳನ್ನು ಜನರು ಖರೀದಿ ಮಾಡುವದು ಕಂಡುಬಂದಿತ್ತು.

ನೀರು ತುಂಬುವ ಹಬ್ಬದ ದಿನದಿಂದಲೇ ತಮ್ಮ ತಮ್ಮ ಮನೆ, ಅಂಗಡಿಗಳ ಮುಂದೆ ಆಕಾಶ ಬುಟ್ಟಿ ಹಾಕುವ ಜೊತೆಗೆ ದೀಪಗಳನ್ನು ಇಟ್ಟು ದೀಪಾವಳಿ ಆಚರಿಸುತ್ತಾರೆ. ದೀಪಾವಳಿ ಹಬ್ಬವು ಎಲ್ಲರ ಜೀವನದಲ್ಲಿ ಅಂಧಕಾರವನ್ನು ತೊಳೆದು ಹಾಕಿ ಜೀವನದಲ್ಲಿ ಹೊಸ ಬೆಳಕು ಮೂಡಿಸಿಕೊಳ್ಳಬೇಕೆಂಬ ಸಂದೇಶ ನೀಡುತ್ತದೆ.

# ಬಿ.ವೈ ವಿಜಯೇಂದ್ರ ಆಯ್ಕೆಗೆ ಸಂಭ್ರಮಾಚರಣೆ

ಉದಯರಶ್ಮಿ ನ್ಯೂಸ್

ವಿಜಯಪುರ: ಭಾರತೀಯ ಜನತಾ ಪಕ್ಷದ ನೂತನ ರಾಜ್ಯಾಧ್ಯಕ್ಷರಾಗಿ ಬಿ.ವೈ ವಿಜಯೇಂದ್ರ ಅವರು ಆಯ್ಕೆ ಆಗಿರುವ ಹಿನ್ನೆಲೆಯಲ್ಲಿ ಶುಕ್ರವಾರ ನಗರದ ಶಿವಾಜಿ ವೃತ್ತದಲ್ಲಿ ಮಾಜಿ ಸಚಿವ ಅಪ್ಪಾಸಾಹೇಬ್ ಪಟ್ಟಣಶೆಟ್ಟಿ ಅವರ ಅಭಿಮಾನಿಗಳು ಸಂಭ್ರಮಾಚರಣೆ ಆಚರಿಸಿದರು.



ನೂತನ ರಾಜ್ಯಾಧ್ಯಕ್ಷ ವಿಜಯೇಂದ್ರ ಪರ ಹಾಗೂ ಬಿಜೆಪಿ ಪರ ಜೈಕಾರ ಹಾಕಿದ ಅಭಿಮಾನಿಗಳು ಮತ್ತು ಕಾರ್ಯಕರ್ತರು ಪಟಾಕಿ ಹಚ್ಚಿ, ಪರಸ್ಪರ ಸಿಹಿ ಹಂಚಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ, ಮಾಜಿ ಉಪಮೇಯರ್ ಗೋಪಾಲ ಘಟಕಾಂಬಳೆ, ಮಾಜಿ ಕಾರ್ಪೊರೇಟರ್ ಅಪ್ಪು ಸಜ್ಜನ ಸೇರಿದಂತೆ ಹಲವು ಮುಖಂಡರು ಭಾಗಿಯಾಗಿದ್ದರು

ವಿಜಯಪುರದಲ್ಲಿ ಟಿಪ್ಪುಸುಲ್ತಾನ ಜಯಂತೋತ್ಸವ । ಸನ್ಮಾನ । ಧ್ವಜಾರೋಹಣ

# ಟಿಪ್ಪುವಿನಿಂದ ಹಿಂದು ಮಂದಿರಗಳ ರಕ್ಷಣೆ :ಹಮೀದ್ ಮುಶ್ರೀಫ್

ಉದಯರಶ್ಮಿ ನ್ಯೂಸ್

ವಿಜಯಪುರ: ನಗರದ ಟಿಪ್ಪು ಸುಲ್ತಾನ ಸರ್ಕಲ್‌ನಲ್ಲಿ ಟಿ.ಎಸ್. ಎಸ್. ಸಂಘನೆಯ ವತಿಯಿಂದ ಶುಕ್ರವಾರ ಮೈಸೂರು ಹುಲಿ ಟಿಪ್ಪು ಸುಲ್ತಾನ ಅವರ ಜಯಂತೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು.

ಟಿಪ್ಪು ಸುಲ್ತಾನ ಅವರ ಭಾವಚಿತ್ರಕ್ಕೆ ಸರ್ವಧರ್ಮಿಯರು ಒಗ್ಗೂಡಿ ಪುಷ್ಪಾರ್ಚನೆ ಸಲ್ಲಿಸಿ ಟಿಪ್ಪು ಧ್ವಜಾರೋಹಣ ನೆರವೇರಿಸಿ ಜೈಕಾರ ಹಾಕಿದರು.



ಈ ಸಂದರ್ಭ ಮುಖ್ಯ ಅತಿಥಿ–ಯಾಗಿ ಪಾಲ್ಗೊಂಡ ಕೆ.ಪಿ.ಸಿ.ಸಿ. ಸದಸ್ಯ ಹಮೀದ್ ಮುಶ್ರೀಫ್ ಮಾತನಾಡಿ, ತಮ್ಮ ಉದರದಿಂದ ಹುಟ್ಟಿದ ಮಕ್ಕಳನ್ನೆ ಒತ್ತಿ ಇಟ್ಟು ದೇಶದ ರಕ್ಷಣೆ ಮಾಡಿದ ಟಿಪ್ಪು ಸುಲ್ತಾನ ಆದರ್ಶವನ್ನು ಎಲ್ಲರೂ ಅಳವಡಿಸಿಕೊಳ್ಳಬೇಕು. ಆದರೆ ದೇಶದ್ರೋಹಿಗಳು ಟಿಪ್ಪು ಕುರಿತು ಟೀಕೆ ಮಾಡುತ್ತಿದ್ದಾರೆ. ಇದು ಸರಿಯಲ್ಲ. ಟಿಪ್ಪು ಹಿಂದು ಮಂದಿರಗಳ ರಕ್ಷಣೆಗೆ ಶ್ರಮಿಸಿದ್ದಾರೆ. ಇಂಥಹ ಮಹಾನ್ ಪುರುಷರು ಸರ್ವ ಧರ್ಮದವರಿಗೂ ಆದರ್ಶ ಎಂದರು.

ಅಧ್ಯಕ್ಷತೆವಹಿಸಿದ ರೈತ ಮುಖಂಡ ಭೀಮಶಿ ಕಲಾದಗಿ ಮಾತನಾಡಿ, ಟಿಪ್ಪು ಜಯಂತಿ ಅರ್ಥಪೂರ್ಣ ಆಚರಣೆ ಮಾಡಿದ್ದಕ್ಕಾಗಿ ಸಂತೋಷವಾಗಿದೆ. ಟಿಪ್ಪು ಒಬ್ಬ ಮಹಾನ್ ದೊರೆ. ಸಮಾಜ ಕಟ್ಟುವ ಕೆಲಸ ಮಾಡಿದ್ದಾರೆ. ಇಂತಹ ಮಹಾನ್ ಪುರುಷನ ವಿಚಾರಧಾರೆಗಳನ್ನು ಸರ್ವರು ಅಳವಡಿಸಿಕೊಳ್ಳಬೇಕು ಎಂದರು.

ಕಾಂಗ್ರೆಸ್ ಮುಖಂಡ ವೈಜನಾಥ ಕರ್ಪೂರಮಠ ಮಾತನಾಡಿ, ಟಿಪ್ಪು ರಾಜ್ಯವನ್ನು ವಿಸ್ತರಿಸಿದರು. ಸರ್ವಧರ್ಮದ ಸಹಿಷ್ಣು ಆಗಿದ್ದರು. ಶೃಂಗೇರಿ ಮಠಕ್ಕೆ ಅಪಾರವಾದ ಸಂಪತ್ತು ನೀಡಿದವರು ಟಿಪ್ಪು ಸುಲ್ತಾನ. ಇವರ ಸೈನ್ಯದಲ್ಲಿ ಮುಸ್ಲಿಮರಿಗಿಂತ ಹಿಂದು ಸೈನಿಕರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದರು. ಆದರೆ ಕೆಲ ರಾಜಕೀಯ ಮುಖಂಡರು ಟಿಪ್ಪು ಸುಲ್ತಾನ ಹೆಸರಿನಲ್ಲಿ ಸಮಾಜ ಒಡೆಯುವ ಕೆಲಸ ಮಾಡುತ್ತಿದ್ದಾರೆ. ಜನರು ಇದಕ್ಕೆ ಮರುಳಾಗದೆ ಟಿಪ್ಪು ಆದರ್ಶ ತಿಳಿಯಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಇತ್ತೀಚೆಗೆ ಬೆಂಗಳೂರಿನಲ್ಲಿ ರಾಜ್ಯ ಮಟ್ಟದ ರಾಜ್ಯೋತ್ಸವ ಪ್ರಶಸ್ತಿ ಪಡೆದ ಪತ್ರಕರ್ತ ರಫಿ ಭಂಡಾರಿ ಅವರನ್ನು ಟಿ.ಎಸ್. ಎಸ್. ಸಂಘಟನೆಯ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಸನ್ಮಾನಕ್ಕೆ ಪ್ರತಿಯಾಗಿ ಪತ್ರಕರ್ತ ರಫಿ ಭಂಡಾರಿ ಮಾತನಾಡಿ, ದೇಶದ ರಕ್ಷಣೆಗಾಗಿ ಶ್ರಮಿಸಿದ ಟಿಪ್ಪು ಸುಲ್ತಾನ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸುತ್ತಿರುವ ಟಿಎಸ್ಎಸ್ ಸಂಘಟನೆಯ ಕಾರ್ಯ ಶ್ಲಾಘನೀಯ ಎಂದರು.

ಡಿಎಸ್.ಎಸ್. ಮುಖಂಡ ಶ್ರೀನಾಥ ಪೂಜಾರಿ, ಪ್ರಗತಿ ಪರ ಸಂಘಟನೆಯ ಅಪ್ಪಾಸಾಹೇಬ ಯರನಾಳ, ಅಕ್ರಂ ಮಾಶ್ಯಾಳಕರ್ ಮಾತನಾಡಿದರು.

ಟಿ.ಎಸ್. ಎಸ್. ಜಿಲ್ಲಾಧ್ಯಕ್ಷ ಇರಫಾನ ಶೇಖ ಪ್ರಾಸ್ತಾವಿಕವಾಗಿ ಮಾತನಾಡಿದರು.

ಮಹಾನಗರ ಪಾಲಿಕೆ ಮಾಜಿ ಸದಸ್ಯ ಮೈನುದ್ದೀನ್ ಬೀಳಗಿ, ಪಾಲಿಕೆ ಸದಸ್ಯ ಅಪ್ಪು ಪೂಜಾರಿ, ಸದ್ದಾಂ ನಾಡೆವಾಲೆ, ವಸಂತ ಹೊನಮೊಡೆ, ಬೀರಪ್ಪಾ ಜುಮನಾಳ, ಡಾ. ಬಸೀರ್ ಅಹಮ್ಮದ್, ಮಹಾದೇವ ರಾವಜಿ, ಲಕ್ಷ [illegible]ಣ ಹಂದ್ರಾಳ, ಅಸ್ಫಾಕ್ ಮನಗೂಳಿ, ಚಂದ್ರಗಿರಿ ಹೊನ್ನದ, ಶರಣಪ್ಪ ಯಕ್ಕುಂಡಿ, ದಸಗಿರ ಸಾಲುಟಗಿ, ಡಾ. ರಫಿಕ್ ಗುರಿಕಾರ, ಹಾಜಿ ನದಾಫ್, ಇಲಿಯಾಸ ಬಗಲಿ, ರೌಫ್ ಮೌಲಾನಾ, ಆಸಿಫ್ ಹೆರಕಲ್, ಮುನ್ನಾ ಮುಲ್ಲಾ, ಅಲ್ತಾಫ್ ಲಕ್ಕುಂಡಿ, ಮಹಮ್ಮದ್‌ರಫಿಕ್ ಹೆಬ್ಬಾಳ, ಅಫ್ಜಲ್ ಜಾನವೇಕರ್, ಹನ್ನಾನ ಶೇಖ, ಏಜಾಜ್ ಕಲಾದಗಿ, ನಜೀರ್ ತಾಳಿಕೋಟಿ, ಮಕ್ಬೂಲ್ ಮುಲ್ಲಾ, ಶಮಶರ್‌ಅಲಿ ಮುಲ್ಲಾ ಹಾಗೂ ಮುಂತಾದವರು ಪಾಲ್ಗೊಂಡಿದ್ದರು.6

# ಪ್ರತಿಯೊಬ್ಬರೂ ಕಾನೂನು ಅರಿವು ಹೊಂದಬೇಕು :ನ್ಯಾ.ಬನಸೋಡೆ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ಜಗತ್ತಿನಲ್ಲಿಯೇ ದೊಡ್ಡ ಪ್ರಜಾಪ್ರಭುತ್ವ ಹೊಂದಿರುವ ದೇಶ ಭಾರತ. ನಮ್ಮ ದೇಶದ ಪ್ರತಿಯೊಬ್ಬ ಪ್ರಜೆ ಕಾನೂನು ಅರಿವು ಹೊಂದುವ ಜೊತೆಗೆ ಮೂಲಭೂತ ಹಕ್ಕುಗಳು, ಕರ್ತವ್ಯಗಳ ಬಗ್ಗೆ ಜ್ಞಾನ ಹೊಂದಬೇಕೆಂದು ಹಿರಿಯ ಸಿವ್ಹಿಲ್ ನ್ಯಾಯಾಧೀಶ ಪ್ರಕಾಶ ಅರ್ಜುನ ಬನಸೋಡೆ ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ತಾಲೂಕು ಕಾನೂನು ಸೇವೆಗಳ ಸಮಿತಿ, ನ್ಯಾಯವಾದಿಗಳ ಸಂಘ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಯೋಗದಲ್ಲಿ ರಾಷ್ಟ್ರೀಯ ಕಾನೂನು ಸೇವಾ ದಿನದಂಗವಾಗಿ ಗುರುವಾರ ಹಮ್ಮಿಕೊಂಡಿದ್ದ ಕಾನೂನು ಅರಿವು-ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ದೇಶದಲ್ಲಿ ನ್ಯಾಯಾಂಗಕ್ಕೆ ಗೌರವ ಸ್ಥಾನವಿದೆ. ಸರಿಯಾದ ಕಾನೂನು ಎಲ್ಲರಿಗೂ ಸಿಗುವಂತಾಗಬೇಕು. ಈ ನಿಟ್ಟಿನಲ್ಲಿ ತಾಲೂಕು ಕಾನೂನು ಸೇವೆಗಳ ಸಮಿತಿಯು ಸಮಾಜದ ದುರ್ಬಲ ವರ್ಗದ, ಆರ್ಥಿಕ ಸಂಕಷ್ಟದಲ್ಲಿರುವವರಿಗೆ ಉಚಿತ ಕಾನೂನು ಸೇವೆ ಒದಗಿಸುತ್ತದೆ. ಇದರ ಸದುಪಯೋಗ ಪಡೆದುಕೊಳ್ಳಬೇಕೆಂದರು.

ವಕೀಲ ವ್ಹಿ.ಬಿ.ಮರ್ತುರ ರಾಷ್ಟ್ರೀಯ ಕಾನೂನು ಸೇವಾ ದಿನ ಹಾಗೂ ಪೋಕ್ಸೋ ಕಾಯ್ದೆ ಕುರಿತು ಮಾತನಾಡಿ, ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು ಎಂಬ ತತ್ವದಡಿ ಬಾಳುವ ಅಗತ್ಯವಿದೆ. ಇತ್ತೀಚಿನ ದಿನಗಳಲ್ಲಿ ಹೆಚ್ಚು ಪ್ರಕರಣಗಳು ನ್ಯಾಯಾಲಯಕ್ಕೆ ಬರುತ್ತಿವೆ. ಎಲ್ಲರೂ ಕಾನೂನು ಜ್ಞಾನವನ್ನು ಹೊಂದುವ ಮೂಲಕ ಹೆಚ್ಚು ಪ್ರಕರಣಗಳು ನ್ಯಾಯಾಲಯಕ್ಕೆ ಬಾರದಂತೆ ನೋಡಿಕೊಳ್ಳಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ.ಎನ್.ಬಿ.ಹೊಸಮನಿ ಮಾತನಾಡಿ, ಪ್ರತಿಯೊಬ್ಬ ವ್ಯಕ್ತಿಯು ಈ ದೇಶದ, ನೆಲದ ಕಾನೂನಿಗೆ ಒಳಪಟ್ಟಿರುತ್ತಾನೆ. ಅದ್ದರಿಂದ ಎಲ್ಲರೂ ಕಾನೂನಿಗೆ ಗೌರವಿಸಬೇಕೆಂದ ಅವರು, ವಿದ್ಯಾರ್ಥಿಗಳು ನಿರಂತರ ಅಧ್ಯಯನಶೀಲತೆಯನ್ನು ಮೈಗೂಡಿಸಿಕೊಂಡು ಉತ್ತಮ ಭವಿಷ್ಯ ನಿರ್ಮಾಣ ಮಾಡಿಕೊಳ್ಳಬೇಕೆಂದರು.

ನ್ಯಾಯವಾದಿ ಸಂಘದ ಅಧ್ಯಕ್ಷ ಎಚ್.ಎಸ್.ಗುರಡ್ಡಿ ಮಾತನಾಡಿದರು. ಡಾ.ಪ್ರಶಾಂತ ಟಿ.ಆರ್.ಸ್ವಾಗತಿಸಿದರು. ಡಾ.ಯುವರಾಜ ವಾದನಶೆಟ್ಟಿ ನಿರೂಪಿಸಿದರು. ಡಾ.ಎಚ್.ಎಂ.ನಾಟೀಕಾರ ವಂದಿಸಿದರು.

# ಹದಗೆಟ್ಟ ರಸ್ತೆ ಸುಧಾರಣೆಗೆ ಆಗ್ರಹ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ತಾಲೂಕಿನ ಇಂಗಳೇಶ್ವರ ಗ್ರಾಮದ ಬೀರಲಿಂಗೇಶ್ವರ ಬಡಾವಣೆಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮುಂದೆ ಹಾಯ್ದು ಹೋಗುವ ಮುಖ್ಯ ರಸ್ತೆಯು ತುಂಬಾ ಹದಗೆಟ್ಟು ಹೋಗಿರುವದರಿಂದಾಗಿ ಮಳೆ ನೀರು ನಿಂತು ಕೊಳಚೆ ಗುಂಡಿ ನಿರ್ಮಾಣ ಗೊಂಡಿದೆ. ಇದರಿಂದಾಗಿ ನಿತ್ಯ ಶಾಲೆಗೆ ವಿದ್ಯಾರ್ಥಿಗಳು ಈ ರಸ್ತೆ ಮೂಲಕವಾಗಿಯೇ ಹೋಗುವ ದುಸ್ಥಿತಿಯಿದೆ. ರಸ್ತೆ ಸಂಪೂರ್ಣ ಹದಗೆಟ್ಟಿರುವದರಿಂದಾಗಿ ಅಲ್ಲಲ್ಲಿ ಗುಂಡಿಗಳು ನಿರ್ಮಾಣವಾಗಿ ನೀರು ನಿಂತಿದೆ. ಒಂದು ವೇಳೆ ವಿದ್ಯಾರ್ಥಿಗಳು ಹಾಯತಪ್ಪಿ ಗುಂಡಿಯೊಳಗೆ ಕಾಲಿಟ್ಟರೆ ಅಪಾಯ ತಪ್ಪಿದ್ದಲ್ಲ. ಈ ರಸ್ತೆಯಲ್ಲಿ ಸಂಚರಿಸುವ ವಾಹನ ಸವಾರರು ಪ್ರಯಾಸ ಪಡುವಂತಾಗಿದೆ. ಈ ರಸ್ತೆ ಹಲವಾರು ತಿಂಗಳುಗಳಿಂದ ಹದಗೆಟ್ಟು ಹೋಗಿದ್ದರೂ ಸಂಬಂಧಿಸಿದ ಇಲಾಖೆಯು ಗಮನಹರಿಸುತ್ತಿಲ್ಲ. ಮುಂದೆ ಅಪಘಾತಗಳಾಗುವ ಮುನ್ನವೇ ಇಲಾಖೆಯು ಎಚ್ಚೆತ್ತುಕೊಂಡು ರಸ್ತೆ ರಿಪೇರಿ ಮಾಡಿ ಡಾಂಬರೀಕರಣ ಮಾಡುವ ಮೂಲಕ ಶಾಲಾ ಮಕ್ಕಳಿಗೆ, ವಾಹನ ಸವಾರರು ಸುಗಮವಾಗಿ ಸಂಚರಿಸುವಂತೆ ಮಾಡಬೇಕೆಂದು ರೈತ ಮುಖಂಡ ಅರವಿಂದ ಕುಲಕರ್ಣಿ ಪ್ರಕಟಣೆಯ ಮೂಲಕ ಆಗ್ರಹಿಸಿದ್ದಾರೆ.

# ನಾಗರಾಳೆ ಸಂಸ್ಥೆಯಿಂದ ಅನಾಥ ಮಕ್ಕಳಿಗೆ ಸ್ವೆಟರ್ ವಿತರಣೆ

**ಉದಯರಶ್ಮಿ ನ್ಯೂಸ್**



ವಿಜಯಪುರ: ನಾಗರಾಳೆ ಶಿಕ್ಷಣ ಸಂಸ್ಥೆ, ವಿಜಯಪುರ ವತಿಯಿಂದ ದೀಪಾವಳಿ ವಿಶೇಷ ಹಾಗೂ ಚಳುವಳಿಗಾಲದ ಸಮಯದಲ್ಲಿ ಉಪಯುಕ್ತ ಆಗುವಂತೆ ವಿಜಯಪುರ ನಗರದ ಬಾಗಲಕೋಟ ರಸ್ತೆಯಲ್ಲಿರುವ ಅನಾಥಾಶ್ರಮದಲ್ಲಿ ಎಲ್ಲ ಮಕ್ಕಳಿಗೂ ನಾಗರಾಳೆ ಶಿಕ್ಷಣ ಸಂಸ್ಥೆ, ಮತ್ತು ಸಿಹಿಯನ್ನು ಹಂಚಲಾಯಿತು.

ಈ ಸಮಯದಲ್ಲಿ ಸಂಸ್ಥೆಯ ಅಧ್ಯಕ್ಷ ಸಿದರಾಯ ಬಿ. ನಾಗರಾಳೆ ಇವರು ಮಾತನಾಡಿ, ನಮ್ಮ ಸಂಸ್ಥೆಯಿಂದ ಇಲ್ಲಿ ವಾಸವಾಗಿರುವ ಅನಾಥ ಮಕ್ಕಳಿಗೆ ಸ್ವೆಟರ್ ನೀಡಿದ್ದು ಅತೀವ ಸಂತಸವನ್ನುಂಟು ಮಾಡಿದೆ. ಈ ಎಲ್ಲ ಮಕ್ಕಳಿಗೆ ದೇವರು ಆರೋಗ್ಯವನ್ನು ನೀಡಲಿ, ದೀಪಾವಳಿಯು ಇವರ ಬಾಳಲ್ಲಿ ಹೊಸ ಹುಮ್ಮಸ್ಸನ್ನು ತರಲೆಂದು ಶುಭ ಹಾರೈಸಿದರು.

ನಂತರ ಮುಖ್ಯ ಅತಿಥಿಗಳಾಗಿ ಆಗಮಿಸಿದ ಕರ್ನಾಟಕ ರಾಜ್ಯ ಕಾರ್ಮಿಕರ ಮತ್ತು ಬಡ ರೋಗಿಗಳ ಕಲ್ಯಾಣ ಪರಿಷತ್ (ಎನ್.ಜಿ.ಓ) ಅಧ್ಯಕ್ಷ ಅಶೋಕ ಜುಗತಿ ಮಾತನಾಡಿ, ಇಲ್ಲಿ ಆಶ್ರಯ ಪಡೆದಿರುವ ಎಲ್ಲ ಮಕ್ಕಳು ಅನಾಥ ಮಕ್ಕಳಲ್ಲ, ಇವರು ದೇಶದ ಆಸ್ತಿಗಳಾಗಿದ್ದಾರೆ. ಇಂತಹ ಅನಾಥ ಮಕ್ಕಳಿಗೆ ಸರಕಾರವು ಇವರ ಶಿಕ್ಷಣಕ್ಕಾಗಿ ಹೆಚ್ಚಿನ ಒತ್ತು ನೀಡಲೆಂದು ಕೋರಿದರು.

ಈ ಸಂದರ್ಭದಲ್ಲಿ ಸಿಬ್ಬಂದಿಗಳಾದ ಭೀಮರಾವ ದೇಸಾಯಿ, ಯಲ್ಲುಬಾಯಿ ಚವ್ಹಾಣ, ಮಂಜುನಾಥ ಚಲವಾದಿ, ಪ್ರೀಯಾಂಕಾ ಚಲವಾದಿ ಮುಂತಾದವರು ಉಪಸ್ಥಿತರಿದ್ದರು.

# ನ.16 ರಂದು ಶಿಕ್ಷಕರಿಗೆ ಸಹಪಠ್ಯ ಚಟುವಟಿಕೆ ಸ್ಪರ್ಧೆ

**ಉದಯರಶ್ಮಿ ನ್ಯೂಸ್**




ಬಸವನಬಾಗೇವಾಡಿ: ಸರ್ಕಾರಿ, ಅನುದಾನಿತ ಮತ್ತು ಮಾನ್ಯತೆ ಪಡೆದ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಶಿಕ್ಷಕರಿಗೆ ನ. 16 ರಂದು ಪಟ್ಟಣದಲ್ಲಿ ತಾಲೂಕು ಮಟ್ಟದ ಸಹ-ಪಠ್ಯ ಚಟುವಟಿಕೆ ಸ್ಪರ್ಧೆ ಹಮ್ಮಿಕೊಂಡಿದೆ. ಈ ಸ್ಪರ್ಧೆಯಲ್ಲಿ ಶಿಕ್ಷಕ ಬಾಂಧವರು ಭಾಗವಹಿಸುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಕ್ರಮ ವಹಿಸಬೇಕೆಂದು ಕ್ಷೇತ್ರಶಿಕ್ಷಣಾಧಿಕಾರಿ ವಸಂತ ರಾಠೋಡ ಹೇಳಿದರು.

ಪಟ್ಟಣದ ಕ್ಷೇತ್ರ ಸಮನ್ವಯಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಗುರುವಾರ ಸಿಆರ್‌ಸಿ, ಬಿಆರ್‌ಪಿಗಳ ಸಭೆಯಲ್ಲಿ ಮಾತನಾಡಿದ ಅವರು, ಒಬ್ಬ ಶಿಕ್ಷಕ ಒಂದು ಸ್ಪರ್ಧೆಯಲ್ಲಿ ಮಾತ್ರ ಭಾಗವಹಿಸಲು ಅವಕಾಶವಿದೆ. ಪ್ರಥಮ ಸ್ಥಾನ ಪಡೆದ ಶಿಕ್ಷಕರು ಮಾತ್ರ ಮುಂದಿನ ಹಂತಕ್ಕೆ ಅರ್ಹನಾಗುತ್ತಾರೆ.ಯಾವುದೇ ಸ್ಪರ್ಧೆಯಲ್ಲಿ ರಾಜ್ಯಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದಿರುವ ಶಿಕ್ಷಕರು ಆ ವಿಷಯದಲ್ಲಿ ಮತ್ತೆ ಸ್ಪರ್ಧಿಸಲು ಅರ್ಹರಾಗುವುದಿಲ್ಲ. ಆದರೆ ಇತರೇ ಸ್ಪರ್ಧೆಗಳಲ್ಲಿ ಭಾಗವಹಿಸಲು ಅವಕಾಶವಿದೆ. ಈ ಸಲ ಜನಪದ ಹಾಡು, ಆಶುಭಾಷಣ, ಪ್ರಬಂಧ, ಚಿತ್ರಕಲೆ, ರಸಪ್ರಶ್ನೆ ಸ್ಪರ್ಧೆಗಳಿವೆ. ಈ ಸಹ-ಪಠ್ಯ ಚಟುವಟಿಕೆಗಳ ಸ್ಪರ್ಧೆಯಲ್ಲಿ ಭಾಗವಹಿಸುವ ಶಿಕ್ಷಕರು ತಾಲೂಕಿನ ನೋಡಲ್ ಅಧಿಕಾರಿ ಬಿಆರ್‌ಪಿ ಎಂ.ವ್ಹಿ. ಗಬ್ಬೂರ ಅವರಲ್ಲಿ ತಮ್ಮ ಹೆಸರು ನೋಂದಾಯಿಸಿಕೊಳ್ಳಬೇಕೆಂದರು.

ಸಭೆಯಲ್ಲಿ ಕ್ಷೇತ್ರ ಸಮನ್ವಯಾಧಿಕಾರಿ ಪಿ.ಯು.ರಾಠೋಡ, ಶಿಕ್ಷಣ ಸಂಯೋಜಕ ಜಿ.ಎ.ಗಣಿಯವರ, ಬಿ.ಆರ್‌ಪಿಗಳು, ಸಿಆರ್‌ಪಿಗಳು ಇದ್ದರು.

# ನ.13 ರಿಂದ ಮಧುಮೇಹ ಪಾದ ರೋಗದ ಉಚಿತ ತಪಾಸಣೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ವಿಶ್ವ ಮಧುಮೇಹ ದಿನಾಚರಣೆ ಅಂಗವಾಗಿ ನಗರದ ಬಿ. ಎಲ್. ಡಿ. ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯ ಆಸ್ಪತ್ರೆಯ ಶಸ್ತ್ರ ಚಿಕಿತ್ಸೆ ವಿಭಾಗದ ವತಿಯಿಂದ ನವೆಂಬರ್ 13 ರಂದು ಸೋಮವಾರದಿಂದ ನವೆಂಬರ 18 ಶನಿವಾರದ ವರೆಗೆ ಒಂದು ವಾರ ಉಚಿತ ಮಧುಮೇಹ ಪಾದ ರೋಗದ (ಡಯಾಬಿಟಿಕ್ ಫುಟ್) ತಪಾಸಣೆ ಮತ್ತು ಚಿಕಿತ್ಸಾ ಸಪ್ತಾಹ ಶಿಬಿರ ಸಪ್ತಾಹ ನಡೆಯಲಿದೆ.

ಈ ಕುರಿತು ಮಾಧ್ಯಮ ಪ್ರಕಟಣೆ ನೀಡಿರುವ ಶಸ್ತ್ರಚಿಕಿತ್ಸ ವಿಭಾಗದ ಮುಖ್ಯಸ್ಥ ಡಾ. ಮಂಜುನಾಥ ಕೋಟೆಣ್ಣವರ, ಆಸ್ಪತ್ರೆಯ ಶಸ್ತ್ರಚಿಕಿತ್ಸೆ ವಿಭಾಗದ ಕೋಣೆ ಸಂಖ್ಯೆ 4ರಲ್ಲಿ ಈ ಶಿಬಿರ ನಡೆಯಲಿದೆ. ಆಸಕ್ತ ಮಧುಮೇಹಿಗಳು ಇದರ ಪ್ರಯೋಜನವನ್ನು ಪಡೆಯಬಹುದಾಗಿದೆ. ಒಂದು ವಾರ ನಡೆಯಲಿರುವ ಈ ಶಿಬಿರದಲ್ಲಿ ಮಧುಮೇಹ ಪಾದರೋಗ ತಪ್ಪಿಸಲು ವಹಿಸಬೇಕಿರುವ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಆರೋಗ್ಯ ಶಿಕ್ಷಣ ನೀಡಲಾಗುವುದು. ಜೊತೆಗೆ ಅಗತ್ಯವಿರುವ ಮಧುಮೇಹಿಗಳಿಗೆ ಪಾದದ ವಿಶೇಷ ಪರೀಕ್ಷೆಗಳಾದ ಕಂಪನ ಜ್ಞಾನ(ಬಯೋಥಿಸಿಯೋ ಮೀಟರ್), ಸ್ಪರ್ಶ ಜ್ಞಾನ( ಮೋನೊಫಿಲಾಮೆಂಟ್), ಪಾದದಲ್ಲಿಯ ಒತ್ತಡ( ಹ್ಯಾರಿಸ್ ಮ್ಯಾಟ್), ರಕ್ತ ಸಂಚಾರ( ಹ್ಯಾಂಡ್ ಹೆಲ್ಡ್ ಡಾಪ್ಲರ್) ಪರೀಕ್ಷೆಗಳನ್ನು ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ- 9481840452 ಸಂಪರ್ಕಿಸಬಹುದಾಗಿದೆ.

# ಮಹಿಳಾ ಸಬಲೀಕರಣಕ್ಕೆ ಎಲ್ಲರೂ ಸಹಕರಿಸಿ :ದೇವರಮನಿ

**ಉದಯರಶ್ಮಿ ನ್ಯೂಸ್**




ವಿಜಯಪುರ: ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಸ್ವಸಹಾಯ ಸಂಘಗಳ ಮಹಿಳೆಯರು ತಮ್ಮ ಪರಿಶ್ರಮ ಹಾಗೂ ಸೃಜನಶೀಲತೆ ಮೂಲಕ ಸಿದ್ಧಪಡಿಸಿದ ಹಲ ವಿನ್ಯಾಸದ ಮಣ್ಣಿನ ದೀಪಗಳಿಗೆ ಮಾರುಕಟ್ಟೆ ಒದಗಿಸುವದಕ್ಕೆ ಹಾಗೂ ಸ್ವದೇಶೀ ಉತ್ಪನ್ನಗಳ ಖರೀದಿಸುವ ಮೂಲಕ

ಮಹಿಳಾ ಸ್ವಾವಲಂಬಿ ಜೀವನ ರೂಪಿಸಿಕೊಳ್ಳಲು ಬೆಂಬಲಿಸಬೇಕು ಎಂದು ಜಿಲ್ಲಾ ಪಂಚಾಯತಿಯ ಯೋಜನಾ ನಿರ್ದೇಶಕ ಸಿಬಿ ದೇವರಮನಿ ಅವರು ಹೇಳಿದರು.

ಜಿಲ್ಲಾ ಪಂಚಾಯತಿ ವತಿಯಿಂದ ಜಿಲ್ಲಾ ಪಂಚಾಯತಿ ಕಾರ್ಯಾಲಯದ ಸಮೀಪದಲ್ಲಿ ಎರಡು ದಿನಗಳ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ "ದೀಪ ಸಂಜೀವಿನಿ" ಇತ್ತಿಚಿಗೆ ಉದ್ಘಾಟಿಸಿ ಅವರು ಮಾತನಾಡಿದರು.

ಸ್ವ-ಸಹಾಯ ಗುಂಪಿನ ಮಹಿಳೆಯರು ಉತ್ಪಾದಿಸುವ ಉತ್ಪನ್ನಗಳಿಗೆ ವಿಶೇಷ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸುವುದರೊಂದಿಗೆ ಆರ್ಥಿಕ ಬಲವರ್ಧನೆಗೆ ಸಹಕಾರ ನೀಡುವ ಉದ್ದೇಶದಿಂದ ಈ ಮೇಳ ಹಮ್ಮಿಕೊಳ್ಳಲಾಗಿದೆ.

ವಿಜಯಪುರ ನಗರ ಮತ್ತು ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಈ ಮೇಳಕ್ಕೆ ಆಗಮಿಸಿ, ಉತ್ಪನ್ನಗಳನ್ನು ಖರೀದಿಸುವ ಮೂಲಕ ಮಹಿಳೆಯರ ಸಬಲೀಕರಣಕ್ಕೆ ಸಹಕಾರ ನೀಡಬೇಕು ಸ್ವಸಹಾಯ ಸಂಘದ ಮಹಿಳೆಯರು ಉತ್ತಮ ಗುಣಮಟ್ಟದ ಉತ್ಪನ್ನಗಳನ್ನು ತಯಾರಿಸಿದ್ದು, ಹೀಗಾಗಿ ಜಿಲ್ಲಾ ಕೇಂದ್ರವಲ್ಲದೆ ತಾಲೂಕು ಕೇಂದ್ರಗಳಲ್ಲೂ ಕೂಡ ದೀಪ ಸಂಜೀವಿನಿ ಪ್ರಯುಕ್ತ ಮಳಿಗೆ ಹಾಕುವುದರ ಮೂಲಕ ಸ್ತ್ರೀ ಶಕ್ತಿಯ ಕೈ ಬಲಪಡಿಸಬೇಕು ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ನಬಾರ್ಡ ಸಂಸ್ಥೆಯ ವಿಕಾಸ ರಾಠೋಡ, ಜಿಲ್ಲಾ ಮತ್ತು ತಾಲೂಕು ಎನ್‌ಆರ್‌ಎಲ್-ಎಂ ಸಿಬ್ಬಂದಿ, ವಿವಿಧ ತಾಲೂಕಿನ ಸ್ವಸಹಾಯ ಸಂಘದ ಮಹಿಳೆಯರು ಉಪಸ್ಥಿತರಿದ್ದರು.

# ವೃಕ್ಷೋತ್ಥಾನ್ ಹೆರಿಟೇಜ್ ರನ್‌ನಲ್ಲಿ ಸರ್ವರೂ ಪಾಲ್ಗೊಳ್ಳಿ :ಎಡಿಸಿ ಮುರಗಿ

**ಉದಯರಶ್ಮಿ ನ್ಯೂಸ್**



ವಿಜಯಪುರ: ಪರಿಸರ ಜಾಗೃತಿ, ಪ್ರಾಚೀನ ಸ್ಮಾರಕಗಳ ಸಂರಕ್ಷಣೆಗಾಗಿ ಡಿಸೆಂಬರ್ 24 ರಂದು ನಗರದಲ್ಲಿ ಆಯೋಜಿಸಲಾಗಿರುವ ವೃಕ್ಷೋತ್ಥಾನ್ ಹೆರಿಟೇಜ್ ರನ್- 2023ರಲ್ಲಿ ಎಲ್ಲರೂ ಸಕ್ರೀಯವಾಗಿ ಪಾಲ್ಗೊಂಡು ಇದನ್ನು ಐತಿಹಾಸಿಕ ಕಾರ್ಯಕ್ರಮವನ್ನಾಗಿ ಮಾಡಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಕರೆ ನೀಡಿದ್ದಾರೆ.

ವೃಕ್ಷೋತ್ಥಾನ್ ಹೆರಿಟೇಜ್ ರನ್-2023 ಅಂಗವಾಗಿ ನೋಂದಣಿ ಸಮಿತಿಯ ವತಿಯಿಂದ ಇಂದು ಶುಕ್ರವಾರ ನಗರದ ಸರಕಾರಿ ಬಾಲಕಿಂಯರ ಪದವಿ ಪೂರ್ವ ಕಾಲೇಜಿನಲ್ಲಿ ನಡೆದ ಪಿಯು ಸರಕಾರಿ, ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ಕಾಲೇಜುಗಳ ಪ್ರಾಚಾರ್ಯರ ಸಭೆಯಲ್ಲಿ ಮಾತನಾಡಿದರು.

ವಿಜಯಪುರ ಜಿಲ್ಲೆಯಲ್ಲಿ ಅರಣ್ಯ ಪ್ರದೇಶ ಕೇವಲ ಶೇ. 0.17ರಷ್ಟಿದೆ. ಈ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಅವರು ಈ ಹಿಂದೆ ಜಲಸಂಪನ್ಮೂಲ ಸಚಿವರಾಗಿದ್ದಾಗ ಪ್ರಾರಂಭಿಸಿದ ಕೋಟಿ ವೃಕ್ಷ ಅಭಿಯಾನದ ಪರಿಣಾಮ ಈಗ ಅರಣ್ಯ ಪ್ರದೇಶ ಹೆಚ್ಚಾಗಿದೆ. ಈ ಅಭಿಯಾನದ ಅಂಗವಾಗಿ ಜಿಲ್ಲೆಯಲ್ಲಿ ಸರಕಾರಿ ಜಮೀನು, ಖಾಸಗಿ ಜಮೀನಿನನಲ್ಲಿ ಈವರೆಗೆ 1.30 ಕೋ. ಸಸಿ ನೆಡಲಾಗಿದೆ. ಈಗ ಅರಣ್ಯ ಪ್ರದೇಶ ಹೆಚ್ಚಳ ಮತ್ತು ಪ್ರಾಚೀನ ಸ್ಮಾರಕಗಳ ಬಗ್ಗೆ ಸಂರಕ್ಷಣೆ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ವೃಕ್ಷೋತ್ಥಾನ ಹೆರಿಟೇಜ್ ರನ್-2023 ಆಯೋಜಿಸಲಾಗಿದೆ. ಎಲ್ಲ ಪ್ರಾಚಾರ್ಯರು, ಉಪನ್ಯಾಸಕರು ಮತ್ತು ಉಪನ್ಯಾಸಕರು ಸಕ್ರೀಯರಾಗಿ ಪಾಲ್ಗೊಳ್ಳಬೇಕು. ವಿದ್ಯಾರ್ಥಿಗಳಿಂದಲೂ ನೋಂದಣಿ ಮಾಡಿಸಬೇಕು. ಈ ಕಾರ್ಯಕ್ರಮವನ್ನು ಐತಿಹಾಸಿಕವಾಗಿ ಮಾಡಲು ಜಿಲ್ಲಾಡಳಿತದ ವತಿಯಿಂದ ಮನವಿ ಮಾಡುತ್ತಿದ್ದೇವೆ ಎಂದು ಅವರು ಹೇಳಿದರು.

ವೃಕ್ಷೋತ್ಥಾನ್ ಸಂಚಾಲಕ ಮುರುಗೇಶ ಪಟ್ಟಣಶೆಟ್ಟಿ ಮಾತನಾಡಿ, 2017ರಲ್ಲಿ ಪ್ರಾರಂಭವಾದ ಕೋಟಿ ವೃಕ್ಷ ಅಭಿಯಾನದ ಮುಂದುವರೆದ ಭಾಗವಾಗಿ ಈಗ ವೃಕ್ಷೋತ್ಥಾನ್ ಆಯೋಜಿಸಲಾಗುತ್ತಿದೆ. ಕಳೆದ ಬಾರಿ ನಡೆದ ಅಭಿಯಾನದಲ್ಲಿ ಪ್ರಾದೇಶಿಕ ಅರಣ್ಯ ವಿಭಾಗ, ಸಾಮಾಜಿಕ ಅರಣ್ಯ ವಿಭಾಗ ಹಾಗೂ ಕೆಬಿಜೆಎನ್‌ಎಲ್ ಅರಣ್ಯ ವಿಭಾಗದವರು ಪ್ರತಿವರ್ಷ ತಲಾ 25 ಲಕ್ಷದಂತೆ ಸಸಿಗಳ್ನು ನೀಡಿದ್ದರು. ಅವುಗಳಲ್ಲಿ ಈಗ ಶೇ. 80ರಷ್ಟು ಸಸಿಗಳು ಸುಸ್ಥಿತಿಯಲ್ಲಿ ಬೆಳೆಯುತ್ತಿವೆ. ವಿಜಯಪುರ ಜಿಲ್ಲೆಯ ಪರಿಸರಕ್ಕೆ ಪೂರಕವಾದ ಗಿಡಗಳ್ನನು ಬೆಳೆಯಲಾಗುತ್ತಿದೆ. ಅಲ್ಲದೇ, ಅಂದು ಪುಣೆಯ ಉದ್ಯಮಿ ಅಣ್ಣಾರಾಯ ಬಿರಾದಾರ ಅವರ ಸಲಹೆಯಂತೆ ಮೊದಲ ಮ್ಯಾರಾಥಾನ್ ಪ್ರಾರಂಭಿಸಲಾಯಿತು. ಅಲ್ಲದೇ, ಅದಕ್ಕೆ ಚಿತ್ರನಟ ಯಶ್ ರಾಯಭಾರಿಯಾಗಿದ್ದರು. ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಮ್ಯಾರಾಥಾನ್ ಆಯೋಜಿಸಲಾಗಿತ್ತು. ಅಲ್ಲದೇ, ಭೂತನಾಳ ಕೆರೆಯ ಹಿಂದೆ 540 ಎಕರೆಯಲ್ಲಿ 60 ಸಾವಿರ ಸಸಿಗಳನ್ನು ನೆಟ್ಟು ಬೆಳೆದು ಮಾನವ ನಿರ್ಮಿತ ಅರಣ್ಯ ಬೆಳೆಸಲಾಗಿದೆ. ಇದು ದೇಶದಲ್ಲಿಯೇ ಪ್ರಥಮ ಮಾನವ ನಿರ್ಮಿತ ಅರಣ್ಯ ಪ್ರದೇಶ ಎಂದು ಖ್ಯಾತಿ ಪಡೆದಿದೆ. ಜೊತೆಗೆ ಮಮದಾಪುರ ಬಳಿಯೂ 628 ಹೆಕ್ಟೆರ್ ಪ್ರದೇಶದಲ್ಲಿ 57 ಸಾವಿರ ಗಿಡಗಳನ್ನು ನೆಡಲಾಗಿದೆ. ಗ್ರಾಮ ಪಂಚಾಯಿತಿಗೆ ಆದಾಯ ತರುವ ಗಿಡಗಳಿಗೆ ಅಲ್ಲಿ ಪ್ರಾಶಸ್ತ್ಯ ನೀಡಲಾಗಿದೆ. ಈ ಬಾರಿ ಶತಮಾನದ ಸಂತ ಶ್ರೀ ಸಿದ್ದೇಶ್ವರ ಸ್ವಾಮೀಜಿಗಳ ನೆನಪಿನಲ್ಲಿ ವೃಕ್ಷೋತ್ಥಾನ್ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಅರಣ್ಯ ಪ್ರದೇಶ ಒಂದು ಹಂತಕ್ಕೆ ಬರಬೇಕಾದರೆ ಇನ್ನೂ ಸುಮಾರು 20 ವರ್ಷಗಳ ಕಾಲ ಸಸಿ ನೆಡುವ ಕೆಲಸವಾಗಬೇಕಿದೆ. ಇದರಿಂದ ಇಲ್ಲಿನ ಜನರಿಗೆ ಉತ್ತಮ ಆಮ್ಲಜನಕ, ಪೂರಕ ಪರಿಸರ, ಉತ್ತಮ ಆರೋಗ್ಯ ಸಾಧ್ಯವಾಗಲಿದೆ. ಈ ಬಾರಿ ಐದು ವಿಭಾಗಗಳಲ್ಲಿ ಮಹಿಳೆಯರು ಮತ್ತು ಪುರುಷರಿಕಾಗಿ ಪ್ರತ್ಯೇಕ ಮ್ಯಾರಾಥಾನ್ ಆಯೋಜಿಸಲಾಗಿದೆ. ವೃತ್ತಿಪರರಿಗಾಗಿ 21 ಕಿ. ಮೀ, 10 ಕಿ. ಮೀ, ನಡೆಯಲಿದ್ದು, ವಿಜಯಪುರ ನಗರದ ಎಲ್ಲ ಪ್ರಾಚೀನ ಸ್ಮಾರಕಗಳ ಎದುರು ಈ ಮ್ಯಾರಾಥಾನ್ ನಡೆಯಲಿದೆ. ಅಲ್ಲದೇ, ಪದವಿ ವಿದ್ಯಾರ್ಥಿಗಳಿಗಾಗಿ 5 ಕಿ. ಮೀ ಓಟ, ಪಿಯು ವಿದ್ಯಾರ್ಥಿಗಳಿಗಾಗಿ 3.5 ಕಿ. ಮೀ., ಹಿರಿಯ ನಾಗರಿಕರಿಗಾಗಿ ಹಾಗೂ ಮಕ್ಕಳಿಗಾಗಿ ಪ್ರತ್ಯೇಕ ಓಟ ಆಯೋಜಿಸಲಾಗಿದೆ. ಅಲ್ಲದೇ, ನಾನಾ ವಿಭಾಗಗಳಲ್ಲಿ ಪ್ರಥಮ, ದ್ವಿತೀಯ ಮತ್ತು ತೃತಿಯ ಸ್ಥಾನ ಪಡೆಯುವ ಓಟಗಾರರಿಗೆ ಒಟ್ಟು ರೂ. 8.12 ಲಕ್ಷದ ಬಹುಮಾನ ನೀಡಲಾಗುತ್ತಿದೆ. ಈ ವೃಕ್ಷೋತ್ಥಾನ್ ನಲ್ಲಿ ನೋಂದಣಿ ಮಾಡಿದವರಿಗೆ ಟಿ- ಶರ್ಟ್, ಪ್ರಶಸ್ತಿ, ಭಾಗಿಯಾದವರಿಗೆ ಮೆಡಲ್, ಟಿ-ಶರ್ಟ್ ಕೊಡಲಾಗುತ್ತಿದೆ. ಉತ್ತಮ ಗುಣಮಟ್ಟದ ಟಿ-ಶರ್ಟ್ ನ ಒಂದು ಕಡೆ ವೃಕ್ಷೋತ್ಥಾನ್ ಲೋಗೋ ಇದ್ದರೆ, ಮತ್ತೊಂದು ಭಾಗದಲ್ಲಿ ಶ್ರೀ ಸಿದ್ಧೇಶ್ವರ ಸ್ವಾಮೀಜಿಗಳ ಭಾವಚಿತ್ರ ಇರುತ್ತದೆ. ಡಿಸೆಂಬರ್ 24 ರಂದು ರವಿವಾರ ಬೆಳಿಗ್ಗೆ 5 ರಿಂದ ಮಧ್ಯಾಹ್ನ 12ರ ವರೆಗೆ ವೃಕ್ಷೋತ್ಥಾನ್ ಹೆರಿಟೇಜ್ ರನ್-2023 ಕಾರ್ಯಕ್ರಮ ನಡೆಯಲಿದೆ. ಹೊರಗಡೆಯಿಂದಲೂ ವೃತ್ತಿಪರ ಓಟಗಾರರು ಬರುತ್ತಿದ್ದಾರೆ. ನಸುಕಿನ ಜಾವ ವಿಜಯಪುರ ನಗರದ ನಾನಾ ಭಾಗಗಳಿಂದ ಆಗಮಿಸುವ ಓಟಗಾರರಿಗೆ ಸರಕಾರಿ ಬಸ್ ಸೌಲಭ್ಯವನ್ನು ಒದಗಿಸಲಾಗುತ್ತಿದೆ. ಅಷ್ಟೇ ಅಲ್ಲ, ಅಂದು ಹೊರ ಜಿಲ್ಲೆಗಳಿಂದ ಸುಮಾರು 2000 ದಿಂದ 3000 ಜನ ಪ್ರವಾಸಿಗರೂ ಆಗಮಿಸುವ ನಿರೀಕ್ಷೆಯಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಪಿಯು ಶಿಕ್ಷಣ ಇಲಾಖೆ ಉಪನಿರ್ದೇಶಕ ಸಿ. ಕೆ. ಹೊಸಮನಿ, ವೃಕ್ಷೋತ್ಥಾನ ಕೋರ್ ಕಮಿಟಿ ಸದಸ್ಯರಾದ ಉದ್ಯಮಿ ವೀರೇಂದ್ರ ಗುಚ್ಚೆಟ್ಟಿ, ಮಲ್ಲಿಕಾರ್ಜುನ ಯಲಗೊಂಡ, ಹಣಮಂತರಾಯ ಭೈರಗೊಂಡ, ನವೀದ ನಾಗಠಾಣ, ಸರಕಾರಿ ಬಾಲಕಿಯರ ಮತ್ತು ಬಾಲಕರ ಪಿಯು ಕಾಲೇಜುಗಳ ಪ್ರಾಚಾರ್ಯರಾದ ಸಿ. ಬಿ. ನಾಟಿಕಾರ ಮತ್ತು ಬಿ. ಪಿ. ಗಂಗನಳ್ಳಿ, ಎಂ. ಡಿ. ಹೆಬ್ಬಿ, ಎಸ್. ಬಿ. ಸಾವಳಸಂಗ ಮುಂತಾದವರು ಉಪಸ್ಥಿತರಿದ್ದರು.

# ಅತಿಸಾರ ನಿಯಂತ್ರಣ ಜಾಗೃತಿ ಕಾರ್ಯಕ್ರಮ ಅನುಷ್ಟಾನಕ್ಕೆ ಕರೆ

**ಉದಯರಶ್ಮಿ ನ್ಯೂಸ್**



ವಿಜಯಪುರ: ತೀವ್ರತರ ಅತಿಸಾರ ನಿಯಂತ್ರಣ ಪಾಕ್ಷಿಕ ಕಾರ್ಯಕ್ರಮ ನವೆಂಬರ್ 15 ರಿಂದ 28ರವರೆಗೆ ಯಶಸ್ವಿಯಾಗಿ ಹಮ್ಮಿಕೊಂಡು ಯಶಸ್ವಿಗೊಳಿಸಿ ಎಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶಿಂಧೆ ಸೂಚಿಸಿದರು.

ಶುಕ್ರವಾರ ಜಿಲ್ಲಾ ಮಟ್ಟದ ಆರೋಗ್ಯ ಇಲಾಖೆ ಪ್ರಗತಿ ಪರಿಶೀಲನಾ ‘ಸಭೆಯ ಅಧ್ಯಕ್ಷತೆ ವಹಿಸಿ,ಪ್ರತಿ ತಿಂಗಳು ಮೊದಲನೇ ಶನಿವಾರ ಪ್ರಾಥಮಿಕ ಆರೋಗ್ಯ ಕೇಂದ್ರದ ಮಟ್ಟದಲ್ಲಿ ಒಂದು ಗ್ರಾಮ ಆಯ್ಕೆ ಮಾಡಿಕೊಂಡು ಆರೋಗ್ಯ ಮೇಳವನ್ನು ಎಲ್ಲ ಇಲಾಖೆಗಳ ಸಹಕಾರದೊಂದಿಗೆ ಏರ್ಪಡಿಸಿ ಆ ಮೂಲಕ ಸಾರ್ವಜನಿಕ–ರಿಗೆ ಅರಿವು ಮೂಡಿಸಬೇಕು.

ಸರ್ಕಾರದ ಮಾರ್ಗಸೂಚಿಯ ಪ್ರಕಾರ ಸಾರ್ವಜನಿಕರಿಗೆ ಆರೋಗ್ಯ ಸೇವೆ ಒದಗಿಸಬೇಕು ಎಂದು ಹೇಳಿದರು.ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳಲ್ಲಿ ಎಚ್.ಎನ್.ಎಸ್ ಸಮೀಕ್ಷಾ ಕಾರ್ಯಕ್ರಮದ ಕುರಿತು,ರಾಷ್ಟ್ರೀಯ ಬಾಲ್ಯ ಸ್ವಾಸ್ಥ್ಯ ಕಾರ್ಯಕ್ರಮದಡಿ ಸರಕಾರಿ ಶಾಲೆಗಳಲ್ಲಿ,ಅಂಗನವಾಡಿ,

ಅನುದಾನಿತ ಶಾಲೆಯ ಶಾಲಾ ಮಕ್ಕಳ ವೈದ್ಯಕೀಯ ತಪಾಸಣೆ ಕೈಗೊಳ್ಳುವುದು. ಸಕ್ರೀಯ ಕ್ಷಯರೋಗ ಪತ್ತೆ ಮತ್ತು ಉಚಿತ ಚಿಕಿತ್ಸಾ ಆಂದೋಲನಾ ಕಾರ್ಯಕ್ರಮವನ್ನು ದಿನಾಂಕ: 15–11–2023 ರಿಂದ 02–12–2023 ರವರೆಗೆ ಜಿಲ್ಲೆಯಾದ್ಯಂತ ಕಟ್ಟುನಿಟ್ಟಾಗಿ ನಡೆಸುವಂತೆ ಸೂಚಿಸಿದರು.

ಜಿಲ್ಲೆಯ ಎಲ್ಲಾ ತಾಲೂಕಾ ಸಾರ್ವಜನಿಕ ಆಸ್ಪತ್ರೆ ಮತ್ತು ಜಿಲ್ಲಾ ಆಸ್ಪತ್ರೆಯಲ್ಲಿ ಡಯಾಲಿಸಿಸ್ ಕೇಂದ್ರಗಳನ್ನು ಸಮರ್ಪಕವಾಗಿ ನಿರ್ವಹಿಸುವಂತೆ ನೋಡಿಕೊಳ್ಳುವ ಜವಾಬ್ದಾರಿ ನೋಡಲ್ ಅಧಿಕಾ–ರಿಗಳದ್ದಾಗಿದೆ ಅದರ ನಿರ್ವಹಣೆಯಲ್ಲಿ ಲೋಪವಾಗದಂತೆ ಕಾರ್ಯ ನಿರ್ವಹಿಸಲು ಸೂಚಿಸಿದರು.

ಸರ್ಕಾರಿ ಆರೋಗ್ಯ ಸಂಸ್ಥೆಗಳಲ್ಲಿ ಕಡ್ಡಾಯವಾಗಿ ಬಯೋಮೆಟ್ರಿಕ್ ಹಾಜರಾತಿಯನ್ನು ವೈದ್ಯಾಧಿಕಾರಿಗಳು ಸಿಬ್ಬಂದಿ ವರ್ಗದವರು ಪ್ರತಿದಿನ ನಿರ್ವಹಿಸಬೇಕು.ಬಯೋಮೆಟ್ರಿಕ್ ಮೂಲಕ ಹಾಜರಾತಿ ಅಳವಡಿಸಿಕೊಳ್ಳದ ಅಧಿಕಾರಿ,ಸಿಬ್ಬಂದಿಗಳ ವೇತನ ತಡೆ ಹಿಡಿಯಲಾಗುವುದು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಬಸವರಾಜ ಹುಬ್ಬಳ್ಳಿ, ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳು, ತಾಲೂಕಾ ಆರೋಗ್ಯಾಧಿಕಾರಿಗಳು,

ಜಿಲ್ಲಾ ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಅಧಿಕಾರಿಗಳಾದ ಡಾ.ಕೆ ಡಿ ಗುಂಡಬಾವಡಿ ಉಪಸ್ಥಿತ–ರಿದ್ದರು.

# ಮಹಿಳೆ ಕಾಣೆ: ಪತ್ತೆಗೆ ಮನವಿ

**ಉದಯರಶ್ಮಿ ನ್ಯೂಸ್**



ವಿಜಯಪುರ: ಅಂದಾಜು 40 ವಯಸ್ಸಿನ ಸೀತಾ ಅಶೋಕ ದರ್ಗಾ ಎಂಬ ಮಹಿಳೆ ಕಾಣೆಯಾಗಿರುವ ಕುರಿತು ವಿಜಯಪುರ ಗೋಲಗುಂಬಜ್ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮಹಿಳೆ ಪತ್ತೆಗಾಗಿ ಸಾರ್ವಜನಿಕರಲ್ಲಿ ಪೊಲೀಸ್ ಠಾಣೆ ಪಿಎಸ್.ಐ. ಅವರು ಮನವಿ ಮಾಡಿಕೊಂಡಿದ್ದಾರೆ.

ಕಾಣೆಯಾದ ಮಹಿಳೆ 4.6 ಅಡಿ ಎತ್ತರ, ತಲೆಯಲ್ಲಿ ಕಪ್ಪು ಕೂದಲು, ಸಾಧಗಪ್ಪು ಮೈಬಣ್ಣ, ಸಾಧಾರಣ ಮೈಕಟ್ಟು, ದುಂಡು ಮುಖ, ನೆಟ್ಟನೆಯ ಮೂಗು, ಕೆಂಪು ಬಣ್ಣದ ಸೀರೆ ಧರಿಸಿದ್ದು, ಕನ್ನಡ ಭಾಷೆ ಮಾತನಾಡತ್ತಿದ್ದು, ಈ ಚಹರೆಪಟ್ಟಿಯುಳ್ಳ ಮಹಿಳೆ ಪತ್ತೆಯಾದಲ್ಲಿ ಸಾರ್ವಜನಿಕರು ಗೋಲ್ ಗುಂಬಜ್ ಪೊಲೀಸ್ ಠಾಣೆ, ಪಿ.ಎಸ್. ದೂರವಾಣಿ ಸಂಖ್ಯೆ : 08352–250214, ಎಸ್.ಡಿ.ಪಿ.ಓ– 08352–250252, 08352–253100, 08352–250152, 0831–2405201 ದೂರವಾಣಿ ಸಂಖ್ಯೆಗೆ ಮಾಹಿತಿ ನೀಡುವಂತೆ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಗುರಿ ತಲುಪಲು ಸತತ ಪ್ರಯತ್ನವಾದಿಯಾಗಿ :ಡಾ.ಜಯಪ್ರಸಾದ

**ಉದಯರಶ್ಮಿ ನ್ಯೂಸ್**



ಇಂಡಿ: ಅವಕಾಶಗಳು ಎಲ್ಲರಿಗೂ ಸಮನಾಗಿದ್ದು, ಅದನ್ನು ಸರಿಯದ ಹಂತದಲ್ಲಿ ಉಪಯೋಗಿಸಿಕೊಳ್ಳುವವನು ಯಶಸ್ವಿಯಾಗುತ್ತಾನೆ ಎಂದು ಇಂಡಿಯ ಜಿ.ಆರ್.ಗಾಂಧಿ ಕಲಾ ಮತ್ತು ವೈ.ಎ. ಪಾಟೀಲ ವಾಣಿಜ್ಯ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಡಾ. ಜಯಪ್ರಕಾಶ.ಡಿ ಹೇಳಿದರು.

ಅವರು ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಉದ್ಯೋಗ ಭರವಸಾ ಕೋಶ ಮತ್ತು ಐಕ್ಯೂಎಸಿ ಘಟಕದ ಸಹಯೋದಲ್ಲಿ ಹಮ್ಮಿಕೊಂಡ “ಉದ್ಯೋಗ ಭರವಸಾ ಕೋಶದ”ಪಾತ್ರ ಮತ್ತು ಪ್ರಾಮುಖ್ಯತೆ ಪುನಶ್ಚೇತನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಉದ್ಯೋಗ ಪಡೆಯಬಹುದಾದ ಸಂಗತಿಗಳನ್ನು ಹೇಳಿದ ಅವರು ಇಂದಿನ ವಿದ್ಯಾರ್ಥಿಗಳಲ್ಲಿ ನಿರಂತರ ಓದು ಮತ್ತು ಗುರಿ ತಲುಪುವಲ್ಲಿನ ಮಹತ್ವದ ಕುರಿತಾಗಿ ಮಾತನಾಡಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಪ್ರೊ. ಆರ್.ಎಚ್. ರಮೇಶ ಮಾತನಾಡಿ”ಉದ್ಯೋಗಭರವಸಾ ವಿಷಯದಲ್ಲಿ ಶಿಕ್ಷಕ ಮತ್ತು ವಿದ್ಯಾರ್ಥಿಯ ಜವಾಬ್ದಾರಿ ಸಮನಾಗಿರುತ್ತದೆ. ವಿದ್ಯಾರ್ಥಿಯು ನಿತ್ಯವೂ ನೂತನ ಸಂಗತಿಗಳನ್ನು ತಿಳಿದುಕೊಳ್ಳಲು ಆಸಕ್ತನಾಗಿರಬೇಕು, ಸತತ ಪ್ರಯತ್ನದಿಂದ, ಹಿಡಿದ ಹಾದಿಯನ್ನು ಸುಲಭವಾಗಿ ಮುಟ್ಟಬಹುದು ಎಂದರು.

ವೇದಿಕೆಯಲ್ಲಿ ಉದ್ಯೋಗ ಭರವಸಾ ಕೋಶದ ಸಂಯೋಜ–ಕರಾದ ತಿಪ್ಪಣ್ಣ ಎಸ್. ವಗ್ದಾಳ, ಐಕ್ಯೂಎಸಿ ಸಂಯೋಜಕರಾದ ಡಾ. ಶೀರಿನೂಸುಲ್ತಾನ ಇನಾಂದಾರ, ಪ್ರೊ. ಕಿರಣ ರೇವಣಕರ, ಪ್ರೊ. ರಾಜಲಕ್ಷ್ಮೀ ಆರ್ ವೇದಿಕೆಯಲ್ಲಿದ್ದರು.ಕವೀಂದ್ರಕುಮಾರ ಚಾಬುಕಸ್ವಾರ ಸ್ವಾಗತಿಸಿದರು. ಪರಸಪ್ಪ ದೇವರ ವಂದಿಸಿದರು. ಆಕಾಶ ಪಾಟೀಲ ನಿರೂಪಿಸಿದರು.

# ಪಿಡಿಓಗಳ ನಡುವಣ ಗೊಂದಲ ನಿವಾರಣೆಗೆ ಕರವೇ ಮನವಿ

**ಉದಯರಶ್ಮಿ ನ್ಯೂಸ್**




ಇಂಡಿ: ಈ ಗ್ರಾಮದಲ್ಲಿ ಇಬ್ಬರು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಇದ್ರೂ ಗ್ರಾಮದಲ್ಲಿ ಬೀದಿಯ ದೀಪ ಉರಿಯುವದಿಲ್ಲ, ಕುಡಿಯುವ ನೀರಿನ ಸಮಸ್ಯೆ ಜೊತೆಗೆ ಸ್ವಚ್ಚತಾ ಸಮಸ್ಯೆ ಎದುರಿಸುತ್ತಿದ್ದೇವೆ. ಅದಲ್ಲದೇ ಮೂಲಭೂತ ಸೌಲಭ್ಯಗಳ ಕೊರತೆ ಜೊತೆಗೆ ಇತರೆ ಕಾಮಗಾ–ರಿಯ ಅಭಿವೃದ್ಧಿ ಕೆಲಸ ಕಾರ್ಯಗಳು ಕುಂಠಿತಗೊಂಡಿವೆ. ಆದ್ದರಿಂದ ಗ್ರಾಮಸ್ಥರು ಅನೇಕ ಸಮಸ್ಯೆಗಳಿಂದ ಬಳಲುವಂತಾಗಿದೆ ಎಂದು ದೂರಿ ಕಂದಾಯ ಉಪವಿಭಾಗ ಅಧಿಕಾರಿ ಆಬೀದ್ ಗದ್ಯಾಳ ಅವರಿಗೆ ಕರವೇ ಕಾರ್ಯಕರ್ತರು ಮನವಿ ಸಲ್ಲಿಸಿದರು.

ತಾಲ್ಲೂಕಿನ ಹಿರೇಮಸಳಿ ಗ್ರಾಮದಲ್ಲಿ ಇಬ್ಬರೂ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಇದ್ದರೂ ಗ್ರಾಮದ ಜನರು ಕತ್ತಲಲ್ಲೇ ಇರುವಂತಾಗಿದೆ. ಈ ಗ್ರಾಮದಲ್ಲಿ ಶೋಭಾ ಹೊರಪೇಟೆ ಎಂಬುವರು ಗ್ರಾ.ಪಂ ಅಭಿವೃದ್ಧಿ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದರು. ಆದರೆ ಈಗ ಅವರನ್ನು ವರ್ಗಾವಣೆಗೊಳಿಸಿ, ಅವರ ಸ್ಥಾನಕ್ಕೆ ಮಹಾದೇವ ಕೆರೂಟಗಿ ಎಂಬುವರನ್ನು ನಿಯೋಜನೆ ಮಾಡಿ ಹಿರೇಮಸಳಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಲು ಆದೇಶವಾಗಿದೆ. ಆದರೆ ಈ ಮೊದಲು ಕಾರ್ಯ ನಿರ್ವಹಿಸುತ್ತಿರುವ ಅಭಿವೃದ್ಧಿ ಅಧಿಕಾರಿ ಶೋಬಾ ಹೊರಪೇಟೆ ಅವರು ಕರ್ತವ್ಯಕ್ಕೂ ಹಾಜರಾಗದೇ, ಅಧಿಕಾರವನ್ನೂ ಹಸ್ತಾಂತರಿಸದೆ ವಿಳಂಬ ನೀತಿಯನ್ನು ಅನುಸ–ರಿಸುತ್ತಿದ್ದಾರೆ. ಆದ್ದರಿಂದ ಗ್ರಾಮದಲ್ಲಿ ಅತೀ ಅವಶ್ಯಕ ಮತ್ತು ಮೂಲಭೂತ ಸೌಲಭ್ಯ, ಸೌಕರ್ಯದ ಕೆಲಸಗಳು ಆಗುತ್ತಿಲ್ಲ. ಆದ್ದರಿಂದ ಈ ಇಬ್ಬರ ಅಧಿಕಾರಿಗಳ ಮದ್ಯೆ ಗ್ರಾಮಸ್ಥರು ಸಮಸ್ಯೆಗಳನ್ನು ಅನುಭವಿಸುವಂತಾಗಿದೆ. ಈ ಕೂಡಲೇ ಸರಕಾರದ ಆದ–ೇಶದಂತೆ ಹೊಸದಾಗಿ ಬಂದ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾ–ರಿಯನ್ನು ಕರ್ತವ್ಯ ನಿರ್ವಹಿಸಲು ತಿಳಿಸಿ ಗ್ರಾಮಸ್ಥರ ಅನಾನುಕೂಲ ತಪ್ಪಿಸಬೇಕು ಎಂದು ಪ್ರವೀಣ ಶೆಟ್ಟಿ ಬಣದ ತಾಲೂಕು ಕರವೇ ಅಧ್ಯಕ್ಷ ಶೀವು ಮಲಕಗೊಂಡ ಮನವಿ ಮಾಡಿದರು.

ಈ ಸಂದರ್ಭದಲ್ಲಿ ರಿಯಾಜ್ ಗೌರ, ಸನಾವುಲ್ಲಾ ಗೂಗಿಹಾಳ, ಪಿಂಟು ಪಾಟೀಲ್, ದಯಾನಂದ ಪೂಜಾರಿ, ಫಯಾಜ ಅಹ್ಮದ ಬಾಗವಾನ ಉಪಸ್ಥಿತರಿದ್ದರು.

# ಮಠಗಳಿಂದ ಸಮಾಜಕ್ಕೆ ಸಂಸ್ಕಾರ :ಅದೃಶ್ಯಕಾಡಸಿದ್ದೇಶ್ವರ ಶ್ರೀ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ಮಠಗಳು ಸಮಾಜಕ್ಕೆ ಸಂಸ್ಕಾರ ನೀಡುವಲ್ಲಿ ಬಹು ಪ್ರಮುಖ ಪಾತ್ರವಹಿಸುತ್ತವೆ. ಮಠಗಳಿಂದ ಆಧ್ಯಾತ್ಮಿಕ ಕಾರ್ಯ ನಿತ್ಯ ನಿರಂತರವಾಗಿ ನಡೆಯುವಂತಿ–ರಬೇಕು. ಇಂದಿನ ಯುವಜನಾಂಗಕ್ಕೆ ಒಳ್ಳೆಯ ಸಂಸ್ಕಾರ ನೀಡುವದು ತುಂಬಾ ಮುಖ್ಯವಾಗಿದೆ ಎಂದು ಕನ್ಹೇರಿ ಮಠದ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿ ಹೇಳಿದರು.

ಪಟ್ಟಣದ ಬಸವ ಭವನದಲ್ಲಿ ಸಿದ್ರಾಮೇಶ್ವರ ಮಹಾರಾಜ ಮಠದ ಸಪ್ತಾಹದಂಗವಾಗಿ ಗುರುವಾರ ಹಮ್ಮಿಕೊಂಡಿದ್ದ ಸತ್ಸಂಗ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಮಠಗಳು ಸ್ವಾರ್ಥಕ್ಕಾಗಿ ದುಡಿಯುವಂತಾಗಬಾರದು. ಅವು ಸಮಾಜದ ಅಭಿವೃದ್ಧಿಗೆ ಸಂಸ್ಕಾರಯುತ ಶಿಕ್ಷಣ ಕೊಡುವಂತಾಗಬೇಕು. ಮಕ್ಕಳಿಗೆ ಮಠಗಳು ಸಂಸ್ಕಾರ ನೀಡಬೇಕು. ಮಠಗಳಿಂದ ಸಂಸ್ಕಾರ ಸಿಗದೇ ಹೋದರೆ ಮಠಗಳಿಗೂ, ಮನೆಗಳಿಗೂ ಇರುವ ಅಂತರ ಏನು ಎಂದರು.

ಮಾನವ ಜನ್ಮದಲ್ಲಿ ಭಗವಂತನ ಸ್ಮರಣೆ ಮಾಡುವದು ತುಂಬಾ ಮುಖ್ಯ. ಮನುಷ್ಯನಲ್ಲಿ ಭಕ್ತಿ ಇರಬೇಕು. ಭಕ್ತಿಯನ್ನು ಹೃದಯದಲ್ಲಿ ಬಿತ್ತಬೇಕು. ಭಕ್ತಿಯು ನಿತ್ಯ ಜೀವನದಲ್ಲಿ ಉಪಾಸನೆ ಆಗಬೇಕು. ಭಕ್ತಿಯನ್ನು ಎಂದಿಗೂ ಕುಗ್ಗಿಸಬಾರದು. ಅದನ್ನು ಹಿಗ್ಗಿಸುವಂತಾಗಬೇಕು. ಜೀವನದಲ್ಲಿ ನಡೆಯುವ ಘಟನೆಗಳು ನಡದೇ ನಡೆಯುತ್ತವೆ. ಅವು ನಮ್ಮ ಮನಸ್ಸಿನ ಮೇಲೆ ಪರಿಣಾಮ ಬೀರದಂತೆ ನೋಡಿಕೊಳ್ಳಬೇಕು. ಮನಸ್ಸನ್ನು ಹದ ಮಾಡಬೇಕು. ಮನಸ್ಸಿಗೆ ಬುದ್ಧಿ ಬರುವಂತೆ ಮಾಡಬೇಕು. ಮನಸ್ಸನ್ನು ತಿದ್ದಿಕೊಳ್ಳಬೇಕು. ಮನಸ್ಸಿಗೆ ಸಂಸ್ಕಾರ ಕೊಡಲು ಆಧ್ಯಾತ್ಮ ಅಗತ್ಯವಿದೆ ಎಂದರು.

ಇಲ್ಲಿನ ಸಿದ್ರಾಮೇಶ್ವರ ಮಹಾರಾಜರ ಮಠದ ಜೀರ್ಣೋದ್ಧಾರ ಕಾರ್ಯ ಆರಂಭವಾಗಿದೆ. ಭಕ್ತರ ಸಹಕಾರದಿಂದ ಮಹಾರಾಜರ ಮಠವನ್ನು ಭವ್ಯವಾಗಿ ನಿರ್ಮಾಣ ಮಾಡಲು ಮುಂದಾಗಿದ್ದು. ಶ್ರೀಮಠದಿಂದ ಸಮಾಜಕ್ಕೆ ಒಳ್ಳೆಯ ಸಂಸ್ಕಾರ ನೀಡುವ ನಿಟ್ಟಿನಲ್ಲಿ ನಿತ್ಯ ನಿರಂತರವಾಗಿ ಕಾರ್ಯ ನಡೆಯುವಂತೆ ಕಾರ್ಯಯೋಜನೆ ಹಾಕಿಕೊಳ್ಳಲಾಗುತ್ತದೆ ಎಂದರು.

ಪ್ರತಿ ದಿವಸ ಸಾವಿರಾರು ಜನರಿಗೆ ದಾಸೋಹ ವ್ಯವಸ್ಥೆ ಆಗಬೇಕು. ಇದೊಂದು ಪ್ರವಾಸಿ ತಾಣವಾಗಿರಬೇಕು. ಶ್ರೀಮಠದಿಂದ ಶಾಲೆಗಳನ್ನು ದತ್ತು ತೆಗೆದುಕೊಂಡು ಅಲ್ಲಿನ ಮಕ್ಕಳಿಗೆ ಸಂಸ್ಕಾರಯುತ ಗುಣಮಟ್ಟದ ಶಿಕ್ಷಣ ಕೊಡುವ ಉದ್ದೇಶ ಹೊಂದಲಾಗಿದೆ. ಬಸವ ತತ್ವಜ್ಞಾನ ಇಡೀ ಜಗತ್ತಿಗೆ ಪಸರಿಸುವ ನಿಟ್ಟಿನಲ್ಲಿ ಬಸವೇಶ್ವರರ ಜೀವನ ಚರಿತೆಯನ್ನು ಅರಿತುಕೊಳ್ಳುವಂತಹ ಮ್ಯೂಜಿಯಂ ನಿರ್ಮಾಣ ಮಾಡುವ ಉದ್ದೇಶವಿದೆ. ಈ ಭಾಗದ ಜನರ ಆರೋಗ್ಯಕ್ಕಾಗಿ ವೈದ್ಯರನ್ನು ನೀಡುವ ಉದ್ದೇಶ ಹೊಂದಲಾಗಿದೆ ಎಂದರು.

ಶಿರೋಳದ ಶಂಕರಾರೂಢ ಸ್ವಾಮೀಜಿ ಮಾತನಾಡಿ, ಜೀವನದಲ್ಲಿ ನಾವು ಗುರುವಿನಿಂದ ಮಾತ್ರ ಮುಕ್ತಿ ಪಡೆಯಲು ಸಾಧ್ಯ. ಸಾಧು ಸಂತರ ಸತ್ಸಂಗದಿಂದ ಆನಂದ ಉಂಟಾಗುತ್ತದೆ. ಆತ್ಮಜನವನ್ನು ನಾವು ಗುರುವಿನಿಂದ ಪಡೆದುಕೊಳ್ಳಬೇಕು. ಜಗತ್ತು ಅಸ್ಥಿರವಾಗಿದೆ. ಗುರುವಿನ ಸೇವೆ ಮಾಡುವದರಿಂದ ಜೀವನದಲ್ಲಿ ಪುಣ್ಯ ಪಡೆದುಕೊಳ್ಳಬೇಕೆಂದರು.

ಅಭಿಯಾನಂದ ಸ್ವಾ ಮೀಜಿ, ಗಿರೀಶಾನಂದ ಸ್ವಾಮೀಜಿ, ತಾರಾನಾಥ ಸ್ವಾಮೀಜಿ, ಡಾ.ಶ್ರೀಧಾನಂದ ಸ್ವಾಮೀಜಿ, ಶಿವಲಿಂಗ ಸ್ವಾಮೀಜಿ ಸೇರಿದಂತೆ ಅನೇಕ ಶ್ರೀಗಳು ಸತ್ಸಂಗದಲ್ಲಿ ಭಾಗವಹಿಸಿದ್ದರು.

ಸಚಿವ ಶಿವಾನಂದ ಪಾಟೀಲರ ಸುಪುತ್ರ ಸತ್ಯಜೀತ ಪಾಟೀಲ ಮಾತನಾಡಿದರು. ಸತ್ಸಂಗ ಕಾರ್ಯಕ್ರಮದಲ್ಲಿ ಮುಖಂಡರಾದ ಐ.ಸಿ.ಪಟ್ಟಣಶೆಟ್ಟಿ, ಸುರೇಶ ಹಾ–ರಿವಾಳ, ಅಶೋಕ ಹಾರಿವಾಳ, ಸಂಗಯ್ಯ ಕಾಳಹಸ್ತೇಶ್ವರಮಠ, ಬಸವರಾಜ ನಾಯ್ಕೋಡಿ, ಬಸವರಾಜ ಗಚ್ಚಿನವರ, ಶಿವಾನಂದ ತೋಳನೂರ, ರವಿ ಚಿಕ್ಕೊಂಡ, ವಿನುತ ಕಲ್ಲೂರ, ಬಸವರಾಜ ಚಿಂಚೋಳಿ, ಬಸವರಾಜ ಶೆಂಡೆ, ಶಿವಾನಂದ ಮಂಟಾನವರ ಸೇ–ರಿದಂತೆ ಇತರರು ಭಾಗವಹಿಸಿದ್ದರು. ಈ ಸತ್ಸಂಗ ಕಾರ್ಯಕ್ರಮಕ್ಕೆ ಮಹಾರಾಷ್ಟ್ರದ ವಿವಿಧ ಜಿಲ್ಲೆಗಳಿಂದ ಅಪಾರ ಸಂಖ್ಯೆಯ ಜನರು ಆಗಮಿಸಿದ್ದರು.

# ಶಿಕ್ಷಣದೊಂದಿಗೆ ಸಂಸ್ಕಾರದ ಅರಿವು ಮುಖ್ಯ

**ಉದಯರಶ್ಮಿ ನ್ಯೂಸ್**



ಸಿಂದಗಿ: ರಾಷ್ಟ್ರ ನಿರ್ಮಾಣವೆಂದರೆ ಗಗನ ಚುಂಬಿ ಕಟ್ಟಡಗಳನ್ನು ನಿರ್ಮಾಣ ಮಾಡುವದಲ್ಲ. ನಿಜಾವಾದ ಅರ್ಥದಲ್ಲಿ ರಾಷ್ಟ್ರ ನಿರ್ಮಾಣವೆಂದರೆ ಮೌಲ್ಯಪೂರ್ಣ ಪ್ರಜೆಗಳ ನಿರ್ಮಾಣ. ಅದು ಶಿಕ್ಷಕನ ಮುಖ್ಯ ಕಾರ್ಯವಾಗಬೇಕು ಎಂದು ಮಕ್ಕಳ ಸಾಹಿತಿ ಪಂಡಿತ ಅವಜಿ ಹೇಳಿದರು.

ಪಟ್ಟಣದ ಶ್ರೀ ಪದ್ಮರಾಜ ಶಿಕ್ಷಣ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡ ಬಿ.ಇಡಿ ಅಂತಿಮ ವರ್ಷದ ಪ್ರಶಿಕ್ಷಣಾರ್ಥಿಗಳ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ದೀಪದಾನ ಸಮಾರಂಭದ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ಯಾವ ವಿದ್ಯಾರ್ಥಿ ನಿರಂತರವಾಗಿ ಅಧ್ಯಯನ ಮಾಡುತ್ತಾರೆಯೋ ಅವರು ಮಾತ್ರ ಇಂದಿನ ವೈಜ್ಞಾನಿಕ ಜಗತ್ತಿನಲ್ಲಿ ಶಿಕ್ಷಕನಾಗಲು ಸಾಧ್ಯ. ನಮ್ಮ ಸಂಸ್ಕೃತಿಯಲ್ಲಿ ಶಿಕ್ಷಕನನ್ನು ದೇವರಿಗೆ ಹೋಲಿಸಿದ್ದಾರೆ. ಆರೋಗ್ಯಕ ಸಮಾಜ, ಆರ್ಥಿಕತೆಯ ಅಭಿವೃದ್ದಿಯಲ್ಲಿ ರಾಷ್ಟ್ರದ ಉನ್ನತಿಕರಣದಲ್ಲಿ ಶಿಕ್ಷಕ ಮತ್ತು ಶಿಕ್ಷಣದ ಪಾತ್ರ ಮುಖ್ಯವಾಗಿದೆ. ಶಿಕ್ಷಕರ ಮೇಲೆ ಬಹು ದೊಡ್ಡ ಜವಾಬ್ದಾರಿ ಇದೆ. ಅದನ್ನು ಪ್ರತಿ ಶಿಕ್ಷಕರು ಮತ್ತು ಶಿಕ್ಷಕರಾಗುವವರು ಶ್ರದ್ಧಾ ಭಕ್ತಿಯಿಂದ ಪೂರೈಸಲೇಬೇಕು ಎಂದರು.

ಈ ವೇಳೆ ಅಧ್ಯಕ್ಷತೆ ವಹಿಸಿದ್ದ ರಾಷ್ಟ್ರ ಪ್ರಶಸ್ತಿ ಪುರಸ್ಕøತ ಮಕ್ಕಳ ಹಿರಿಯ ಸಾಹಿತಿ ಹ.ಮ.ಪೂಜಾರ ಮಾತನಾಡಿ, ಇಂದಿನ ಕಾಲಘಟ್ಟ ಬದಲಾವಣೆಯಾದ ಹಾಗೆ ಶಿಕ್ಷಕರು ತಮ್ಮ ಜ್ಞಾನವನ್ನು ವೃದ್ದಿಸಿಕೊಳ್ಳಬೇಕು. ಮಕ್ಕಳ ಮನ ಗೆದ್ದು ಪಾಠ ಮಾಡುವವನೆ ನಿಜವಾದ ಶಿಕ್ಷಕ. ವಿದ್ಯಾರ್ಥಿಗಳ ಬಗ್ಗೆ ಗೌರವ ಮತ್ತು ಸಹಾನುಭೂತಿ ಹೊಂದಿರಬೇಕು ಎಂದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ್ಧ ಸಾರಂಗಮಠದ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು ಆಶೀರ್ವಚನ ನೀಡಿ ಮಾತನಾಡಿ, ಇಂದಿನ ಮಕ್ಕಳಲ್ಲಿ ಸಂಸ್ಕಾರ ಕಡಿಮೆಯಾಗುತ್ತಿದೆ. ಸಂಸ್ಕಾರವಿದ್ದರೆ ಮಾತ್ರ ಎಲ್ಲವೂ ಲಭ್ಯವಾಗುತ್ತದೆ. ಶಿಕ್ಷಕರು ಉತ್ತಮ ಶಿಕ್ಷಣದೊಂದಿಗೆ ಸಂಸ್ಕಾರದ ಅರಿವು ಮೂಡಿಸುವುದು ಇಂದು ಅಗತ್ಯವಾಗಿದೆ ಎಂದರು.

ವೇದಿಕೆ ಮೇಲೆ ಪ್ರಾಚಾರ್ಯ ಜೆ.ಸಿ.ನಂದಿಕೋಲ, ಕಾರ್ಯಧ್ಯಕ್ಷ ದಾನಯ್ಯ ಮಠಪತಿ, ಪ್ರಧಾನ ಕಾರ್ಯದರ್ಶಿ ಸೋಮನಾಥ ಇದ್ದರು. ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ಡಾ.ಶರಣಬಸವ ಜೋಗೂರ, ಎನ್.ಬಿ.ಪೂಜಾರಿ, ಸುಧಾಕರ ಚವ್ಹಾಣ, ರೇವಣಸಿದ್ದ ಹಾಲಕೇರಿ, ಪ್ರಶಾಂತ ಕುಲಕರ್ಣಿ, ವಿದ್ಯಾ ಮೋಗಲಿ, ಚನ್ನುಕತ್ತಿ ಸೇರಿದಂತೆ ಪ್ರಶಿಕ್ಷಣಾರ್ಥಿಗಳು ಇದ್ದರು.

ಕಾರ್ಯಕ್ರಮವನ್ನು ಪ್ರಶಿಕ್ಷಣಾರ್ಥಿ ಕಾಶೀಬಾಯಿ ಬಿರಾದಾರ ನಿರೂಪಿಸಿದರು, ನಾಜೀಯಾ ಮುಲ್ಲಾ ವಂದಿಸಿದರು4

# ಶಿಕ್ಷಣ ಇಲಾಖೆಯಿಂದ ಹಾಕಿ ಪಟು ಜುಬೇರಗೆ ಸನ್ಮಾನ

**ಉದಯರಶ್ಮಿ ನ್ಯೂಸ್**



ವಿಜಯಪುರ: ಇತ್ತೀಚೆಗೆ ತುಮಕೂರಿನಲ್ಲಿ ನಡೆದ 2022–23 ನೇ ಸಾಲಿನ ರಾಜ್ಯ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟದಲ್ಲಿ ವಿಜಯಪುರ ಜಿಲ್ಲೆಯಿಂದ ಹಾಕಿ ಪಂದ್ಯಾವಳಿಯಲ್ಲಿ ಭಾಗವಹಿಸಿ ಅತ್ಯುತ್ತಮ ಪ್ರದರ್ಶನ ನೀಡಿ ರಾಷ್ಟ್ರ ಮಟ್ಟದ ಹಾಕಿ ಪಂದ್ಯಾವಳಿ ಆಡಲು ಓಡಿಸ್ಸಾ ರಾಜ್ಯದ ಭುವನೇಶ್ವರ ನಗರಕ್ಕೆ ತೆರಳುತ್ತಿರುವ ಜಿಲ್ಲಾ ನೌಕರರ ಸಂಘದ ಖಜಾಂಚಿ ಸೈಯದ್ ಜುಬೇರ ಕೆರೂರ ಅವರಿಗೆ ಶುಕ್ರವಾರ ನಗರದ ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜ ತಳವಾರ ಅವರು ತಮ್ಮ ಕಛೇರಿಯಲ್ಲಿ ಸನ್ಮಾನಿಸಿದರು.

ಸನ್ಮಾನಿಸಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ತಳವಾರ ಹಾಕಿ ಆಟದಲ್ಲಿ ಉತ್ತಮ ಪ್ರದರ್ಶನ ನೀಡಿದ ಜುಬೇರ ಕೇರೂರ ಅವರು ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿದ್ದು ಓಡಿಸ್ಸಾದ ಭುವನೇಶ್ವರದಲ್ಲಿ ನಡೆಯುವ ಪಂದ್ಯಾವಳಿಯಲ್ಲಿಯೂ ಸಹ ತಂಡವನ್ನು ಜಯಶಾಲಿಯಾಗಿಸಿ ನಮ್ಮ ಜಿಲ್ಲೆಯ ಕೀರ್ತಿ ಹೆಚ್ಚಿಸಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಎಸ್.ಎಂ.ಪಡಶೆಟ್ಟಿ, ಎ.ಎಪ್.ಅರಳಿಮಟ್ಟಿ, ಡಿ.ಕೆ.ತವಸೆ, ಬಸೀರ್ ನದಾಪ್ ಇದ್ದರು.

# ಇಂದು ಚನ್ನಮ್ಮ ಜಯಂತೋತ್ಸವ, ವಿವಿಧ ಕಾಮಗಾರಿಗಳ ಭೂಮಿ ಪೂಜೆ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ತಾಲೂಕಿನ ಅರಳಿಚಂಡಿ ಗ್ರಾಮದಲ್ಲಿ ನ. 11 ರಂದು ಸಂಜೆ 4 ಗಂಟೆಗೆ ವೀರರಾಣಿ ಕಿತ್ತೂರು ಚನ್ನಮ್ಮ ಜಯಂತೋತ್ಸವ ಹಾಗೂ ವಿವಿಧ ಕಾಮಗಾರಿಗಳ ಭೂಮಿ ಪೂಜಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಸಾನಿಧ್ಯವನ್ನು ಕೂಡಲಸಂಗಮದ ಬಸವ ಜಯಮೃತ್ಯುಂ–ಜಯ ಸ್ವಾಮೀಜಿ, ಇಂಗಳೇಶ್ವರದ ಚನ್ನಬಸವ ಸ್ವಾಮೀಜಿ, ಬಸವನಬಾಗೇವಾಡಿಯ ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ ವಹಿಸುವರು.

ಅಧ್ಯಕ್ಷತೆಯನ್ನು ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕ ಐ.ಸಿ.ಪಟ್ಟಣಶೆಟ್ಟಿ ವಹಿಸುವರು. ಸಚಿವ ಶಿವಾನಂದ ಪಾಟೀಲ ಉದ್ಘಾಟಿಸುವರು. ಮುಖ್ಯಅತಿಥಿಗಳಾಗಿ ಶಾಸಕರಾದ ವಿಜಯಾನಂದ ಕಾಶಪ್ಪನವರ, ರಾಜುಗೌಡ ಪಾಟೀಲ, ಬಾಗಲಕೋಟ ಜಿಪಂ ಮಾಜಿ ಅಧ್ಯಕ್ಷೆ ವೀಣಾ ಕಾಶಪ್ಪನವರ, ಜೆಡಿಎಸ್ ಮುಖಂಡ ಅಪ್ಪುಗೌಡ ಪಾಟೀಲ, ವ್ಹಿಡಿಸಿಸಿ ಬ್ಯಾಂಕಿನ ನಿರ್ದೇಶಕ ಚಂದ್ರಶೇಖರಗೌಡ ಪಾಟೀಲ, ಸಿಪಿಐ ಶರಣಗೌಡ ಗೌಡರ, ಅಖಿಲ ಭಾರತೀಯ ಲಿಂಗಾಯತ ಪಂಚಮಸಾಲಿ ಸಮಾಜದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಶಂಕರಗೌಡ ಬಿರಾದಾರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುರೇಶ ಹಾರಿವಾಳ, ತಾಲೂಕು ಪಂಚಮಸಾಲಿ ಸಮಾಜ ಅಧ್ಯಕ್ಷ ಬಸವರಾಜ ಗೊಳಸಂಗಿ, ಮುಖಂಡರಾದ ಸಂಗಮೇಶ ಓಲೇಕಾರ, ಶರಣಪ್ಪ ಬಳ್ಳಾವೂರ, ಎಪಿಎಂಸಿ ಮಾಜಿ ಅಧ್ಯಕ್ಷ ಶೇಖರ ಗೊಳಸಂಗಿ, ಇಂಗಳೇಶ್ವರ ಗ್ರಾಪಂ ಮಾಜಿ ಅಧ್ಯಕ್ಷ ಭೀಮನಗೌಡ ಪಾಟೀಲ, ಇಂಗಳೇಶ್ವರ ಗ್ರಾಪಂ ಅಧ್ಯಕ್ಷ ಬನ್ನೆಪ್ಪ ಡೋಣೂರ, ಇಂಗಳೇಶ್ವರ ಪಿಕೆಪಿ–ಎಸ್ ಅಧ್ಯಕ್ಷ ಶಿವಾನಂದ ನಡಕಟ್ಟಿ, ಗ್ರಾಪಂ ಸದಸ್ಯರಾದ ಪ್ರಕಾಶ ದೇಸಾಯಿ, ಚೇತನಾ ಹುಡೇದ, ಲಕ್ಷ್ಮೀ ಶಾಖಾಪುರ, ಶ್ರೀಶೈಲ ಚಾಂದಕವಟೆ, ಮಲಕಾಜಿ ಕಲಬುರ್ಗಿ ಆಗಮಿಸುವರು.

# ದೇವರಹಿಪ್ಪರಗಿ: ಟಿಪ್ಪುಸುಲ್ತಾನ ಜಯಂತ್ಯುತ್ಸವ

ಉದಯರಶ್ಮಿ ನ್ಯೂಸ್




ದೇವರಹಿಪ್ಪರಗಿ: ಟಿಪ್ಪುಸುಲ್ತಾನ ವೃತ್ತದಲ್ಲಿ ಟಿಪ್ಪು ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಜಯಂತ್ಯುತ್ಸವ ಆಚರಿಸಲಾಯಿತು.

ಪಟ್ಟಣದಲ್ಲಿ ಶುಕ್ರವಾರ ಟಿಪ್ಪು ಜಯಂತಿ ಅಂಗವಾಗಿ ಟಿಪ್ಪು ಕ್ರಾಂತಿಸೇನೆಯ ಪದಾಧಿಕಾರಿಗಳು ವೃತ್ತದಲ್ಲಿ ಸಭೆ ಸೇರಿ ಟಿಪ್ಪುಸುಲ್ತಾನ ಭಾವಚಿತ್ರಕ್ಕೆ ಪೂಜೆ ನೆರವೇರಿಸಿ ಪುಷ್ಪನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಜೆಡಿಎಸ್ ಯುವಘಟಕದ ಅಧ್ಯಕ್ಷ ಮುನೀರ್ಅಹ್ಮದ್(ಮುನ್ನಾ) ಮಳಖೇಡ ಮಾತನಾಡಿ, ಟಿಪ್ಪು ಸುಲ್ತಾನ ಬ್ರಿಟೀಷರು ದೇಶ ದರೋಡೆ ಮಾಡದಂತೆ ತಡೆದ ಪ್ರಥಮ ವೀರರಾಗಿದ್ದು, ಅಪ್ಪಟ ಕನ್ನಡ ಪ್ರೇಮಿಯಾಗಿದ್ದರು. ಸಾಮಾಜಿಕ ಸಾಮರಸ್ಯಕ್ಕೆ ಸಾಕ್ಷಿಯಾಗಿದ್ದ ಟಿಪ್ಪು ಸುಲ್ತಾನರು ದೇಶದ ಸ್ವಾತಂತ್ರ□□ಕ್ಕಾಗಿ ತನ್ನ ಮಕ್ಕಳನ್ನೇ ಒತ್ತೆ ಇಟ್ಟು ಹೋರಾಡಿ ವೀರಮರಣ ಹೊಂದಿರುವುದು ಇತಿಹಾಸವಾಗಿದೆ. ಇಂತಹ ಮಹಾನ ಚೇತನ ನಮಗೆಲ್ಲ ದಾರಿದೀಪವಾಗಿದ್ದಾರೆ ಎಂದರು.

ಇಮಾಮ್ ಮುಲ್ಲಾ, ಮಹಿಬೂಬ್ ಸುತಾರ, ಇಸ್ಮಾಯಿಲ್ ಮರೋಳ, ಯಾಸೀನ್ ಮಳಖೇಡ, ಉಸ್ಮಾನ್ ಹಚ್ಯಾಳ, ಸುನೀಲ ಕನಮಡಿ, ಭಾಷಾಸಾಬ್ ಹಳ್ಳಿ, ಹುಸೇನ್ ಕೋಕಟನೂರ, ಸಮೀರ್ ಹಚ್ಯಾಳ, ಶಬ್ಬೀರ್ ನದಾಫ್, ಇರ್ಫಾನ್ ನದಾಫ್ ಇದ್ದರು.

# ಶಾಸಕ ಅಶೋಕ ಮನಗೂಳಿಗೆ ಸನ್ಮಾನ

ಉದಯರಶ್ಮಿ ನ್ಯೂಸ್



ಬ್ರಹ್ಮದೇವನಮಡು: ಸಿಂದಗಿ ತಾಲೂಕಿನ ಕಣ್ಣಗುಡ್ಡಿಹಾಳ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ನೂತನ ಎಸ್ಡಿಎಂಸಿ ಅಧ್ಯಕ್ಷ ಮಾನಪ್ಪ ಪೂಜಾರಿ ಹಾಗೂ ಉಪಾಧ್ಯಕ್ಷ ನಾಗಮ್ಮ ಪತ್ತಾರ ಅವರಿಂದ ಶಾಸಕ ಅಶೋಕ ಮನಗೂಳಿ ಅವರನ್ನು ಸನ್ಮಾನಿಸಲಾಯಿತು.

ಈ ವೇಳೆ ಕಾಂಗ್ರೆಸ್ ಯುವ ಮುಖಂಡ ಬಾಪುಗೌಡ ಎಂ.ಪಾಟೀಲ ಇದ್ದರು.

# ದೇವರಹಿಪ್ಪರಗಿ ಪಪಂ ಗೆ ನಾಮನಿರ್ದೇಶನ

ಉದಯರಶ್ಮಿ ನ್ಯೂಸ್







ದೇವರಹಿಪ್ಪರಗಿ: ಪಟ್ಟಣ ಪಂಚಾಯತಿಗೆ ಮೂವರು ಸದಸ್ಯರನ್ನಾಗಿ ನಾಮನಿರ್ದೇಶನ ಮಾಡಿ ಸರಕಾರ ಆದೇಶ ಮಾಡಿದೆ.

ಪೌರಸಭೆಗಳ ಅಧಿನಿಯಮದಂತೆ ಯುವ ಮುಖಂಡ ಶ್ಯಾಮಣ್ಣ ಅಡಿವೆಪ್ಪ ಮೆಟಗಾರ, ಸುನೀಲ ಸುರೇಶ ಕನಮಡಿ ಹಾಗೂ ಹುಸೇನಬಾಷಾ ರಾಜೇಸಾಬ ಕೊಕಟನೂರ ಇವರನ್ನು ಪಟ್ಟಣ ಪಂಚಾಯಿತಿ ಸದಸ್ಯರಾಗಿ ನಾಮನಿರ್ದೇಶನಗೊಂಡಿದ್ದಾರೆ. ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೆ ಗೌರವಾನ್ವಿತ ರಾಜ್ಯಪಾಲರ ಹೆಸರಿನಲ್ಲಿ ನಗರಾಭಿವೃದ್ಧಿ ಇಲಾಖೆಯ ಅಧೀನ ಕಾರ್ಯದರ್ಶಿ ಟಿ.ಮಂಜುನಾಥ ನಾಮನಿರ್ದೇಶನ ಮಾಡಿ ಆದೇಶ ಹೊರಡಿಸಿದ್ದಾರೆ ಎಂದು ಮುಖ್ಯಾಧಿಕಾರಿ ಎಲ್.ಡಿ.ಮುಲ್ಲಾ ತಿಳಿಸಿದ್ದಾರೆ.

# ಮಕ್ಕಳ ಬೇಡಿಕೆ ಈಡೇರಿಸಲು ಕ್ರಮ :ಶಹಾಪೂರ

ಉದಯರಶ್ಮಿ ನ್ಯೂಸ್




ಸಿಂದಗಿ: ಮಕ್ಕಳ ವಿಶೇಷ ಗ್ರಾಮ ಸಭೆ ಮಾಡುವುದರ ಉದ್ದೇಶ, ಮಕ್ಕಳ ಕುಂದುಕೊರತೆಗಳ ಕುರಿತು ಸ್ಥಳೀಯ ಸರ್ಕಾರದ ಮುಂದಿಡುವುದು ಎಂದು ಸಂಗಮ ಸಂಸ್ಥೆ ನಿರ್ದೇಶಕ ಫಾದರ್ ಸಂತೋಷ ಹೇಳಿದರು.

ತಾಲೂಕಿನ ಬಂದಾಳ ಶಾಲೆಯ ಆವರಣದಲ್ಲಿ ಸಂಗಮ ಸಮಗ್ರ ಗ್ರಾಮೀಣ ಅಭಿವೃದ್ಧಿ ಕೇಂದ್ರ ಹಾಗೂ ಬಂದಾಳ ಗ್ರಾಮ ಪಂಚಾಯತ್ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡ ಮಕ್ಕಳ ವಿಶೇಷ ಸಭೆಯಲ್ಲಿ ಮಾತನಾಡಿದ ಅವರು, ಸ್ಥಳೀಯ ಸರ್ಕಾರವೆಂದರೆ ಗ್ರಾಮ ಪಂಚಾಯತ್, ಗ್ರಾಮ ಪಂಚಾಯತ್ ಅಧಿಕಾರಿಗಳು ಗ್ರಾಮ ಸಭೆಯಲ್ಲಿದ್ದಾರೆ. ಮಕ್ಕಳು ತಮ್ಮ ಕುಂದುಕೊರತೆಗಳನ್ನು ಅವರಿಗೆ ಧೈರ್ಯವಾಗಿ ಹೇಳಬೇಕು ಎಂದರು.

ಬಂದಾಳ ಪಂಚಾಯತ್ ಅಧೀನದಲ್ಲಿ ಬರುವ ಶಾಲೆಯ ಮಕ್ಕಳ ಬೇಡಿಕೆಗಳು: ಸರಕಾರಿ ಕನ್ನಡ ಗಂಡು ಮಕ್ಕಳ ಹಿರಿಯ ಪ್ರಾಥಮಿಕ ಶಾಲೆ ಬಂದಾಳ ಶಾಲಾ ಮಕ್ಕಳ ಬೇಡಿಕೆಗಳು– ಶುದ್ದ ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯ, ಅಡುಗೆಕೋಣೆ ಹೈಸ್ಕೂಲ್ ಕಟ್ಟಡ, ಆಟದ ಮೈದಾನ, ಕಂಪೌಂಡ್, ಶಾಲಾ ಜಾಗಕ್ಕೆ ಉತಾರಿ, ಮತ್ತು ಗ್ರಂಥಲಾಯ ವ್ಯವಸ್ಥೆ ಮಾಡಬೇಕು.

ಓತಿಹಾಳ ಶಾಲೆಯ ಮಕ್ಕಳ ಬೇಡಿಕೆಗಳು: ಗ್ರಂಥಾಲಯ, ಪ್ರಾಜೆಕ್ಟರ್, ಸಿ.ಸಿ.ಟಿ.ವಿ, ಆಟೋಟ ಸಾಮಾಗ್ರಿಗಳು, ಗಣಕಯಂತ್ರ ಮತ್ತು ಕಂಪೌಂಡ್ ಮಾಡಬೇಕು.

ಚಿಕ್ಕಸಿಂದಗಿ ಶಾಲೆಯ ಮಕ್ಕಳ ಬೇಡಿಕೆಗಳು: ಕಂಪೌಂಡ್, ಅಡುಗೆಕೂಣೆ, ಶುದ್ದ ಕುಡಿಯುವ ನೀರಿನ ವ್ಯವಸ್ಥೆ, ಶಾಲಾ ಮೆಲ್ಛಾವಣಿ ದುರಸ್ತಿ, ಶೌಚಾಲಯ, ರೇಷನ್ ಕಳ್ಳರನ್ನು ಕಂಡು ಹಿಡಿಯುವುದು ಮತ್ತು ಸಿ.ಸಿ.ಟಿವಿ ಅಳವಡಿಸಬೇಕು.

ಬೂದಿಹಾಳ ಶಾಲೆಯ ಮಕ್ಕಳ ಬೇಡಿಕೆಗಳು: ಶುದ್ದ ಕುಡಿಯುವ ನೀರಿನ ವ್ಯವಸ್ಥೆ, ಕಟ್ಟಡ ಮೇಲ್ಛಾವಣಿ ವ್ಯವಸ್ಥೆ, ಸಾರ್ವಜನಿಕರು ಶಾಲೆ ಕಂಪೌಂಡ್ ಒಳಗೆ ಬಂದು ಮದ್ಯಪಾನ ಮಾಡುತ್ತಾರೆ ಇದನ್ನು ತಡೆಯಬೇಕು ಮತ್ತು ಶೌಚಾಲಯ, ಈ ವ್ಯವಸ್ಥೆಗಳನ್ನು ಅತೀ ಶೀಘ್ರದಲ್ಲಿ ನೇರವೇರಿಸಲು ಮಕ್ಕಳು ತಮ್ಮ ಬೇಡಿಕೆಗಳನ್ನು ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮುಂದಿಟ್ಟರು.

ಕಾರ್ಯಕ್ರಮವನ್ನು ಉದ್ದೇಶಿಸಿ ಪಿಡಿಒ ಬಿ.ಎನ್.ಶಹಾಪೂರ ಮಾತನಾಡಿ, ಶಾಲೆಯ ಮಕ್ಕಳ ಬೇಡಿಕೆಗಳು ಅತ್ಯವಶ್ಯಕವಾಗಿದ್ದು, ಅವುಗಳನ್ನು ಮುಂದಿನ ಕ್ರಿಯಾ ಯೋಜನೆಯಲ್ಲಿ ಹಾಕಿಕೊಂಡು ಕೆಲಸ ಪೂರ್ಣಗೊಳಿಸುವುದಾಗಿ ಮಕ್ಕಳಿಗೆ ಹೇಳಿದರು.

ಈ ವೇಳೆ ಗ್ರಾಮ ಪಂಚಾಯತ್ ಕಾರ್ಯದರ್ಶಿಗಳು ಆರ್.ಎನ್. ಮುಜಾವರ್, ಮತ್ತು ಗ್ರಾಮ ಪಂಚಾಯತ್ ಅಧ್ಯಕ್ಷ ಸುವರ್ಣ ಮಕಣಪೂರ, ಉಪಾಧ್ಯಕ್ಷ ಜೆಟ್ಟೆಪ್ಪ ಉಕ್ಕಲಿ, ಮುಖ್ಯಗುರು ನಿಂಗನಗೌಡ ಪಾಟೀಲ, ಎಮ್. ಕೆ. ಬಿರಾದಾರ, ಚಂದ್ರಶೇಖರ್ ಬುಯಾರ್, ಬಸವರಾಜ ಅಗಸರ, ರಾಜೀವ ಕುರಿಮನಿ ಸೇರಿದಂತೆ ಗ್ರಾಮ ಪಂಚಾಯತ್ ಸದಸ್ಯರು, ಸಂಗಮ ಸಂಸ್ಥೆ ಕಾರ್ಯಕರ್ತರು ಕಾರ್ಯಕ್ರಮದಲ್ಲಿದ್ದರು.

# ನ.16ರ ರಾಣಿ ಚೆನ್ನಮ್ಮ ವಿವಿ ಮಹಿಳಾ ಕಬಡ್ಡಿ ಪಂದ್ಯಾವಳಿ ಯಶಸ್ಸಿಗೆ ಕರೆ

ಉದಯರಶ್ಮಿ ನ್ಯೂಸ್



ದೇವರಹಿಪ್ಪರಗಿ: ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಏಕವಲಯ ಮಹಿಳಾ ಕಬಡ್ಡಿ ಪಂದ್ಯಾವಳಿ ಹಾಗೂ ಯುನಿವರ್ಸಿಟಿ ಬ್ಲೂ □□ ತಂಡದ ಆಯ್ಕೆ ಇದೇ ಪ್ರಥಮ ಬಾರಿ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆಶ್ರಯದಲ್ಲಿ ಜರುಗುತ್ತಿದ್ದು, ಯಾವುದೇ ಕುಂದುಕೊರತೆಗಳಿಲ್ಲದೇ ಯಶಸ್ವಿಯಾಗಿ ಜರುಗಬೇಕು ಎಂದು ತಹಶೀಲ್ದಾರ ಪ್ರಕಾಶ ಸಿಂದಗಿ ಹೇಳಿದರು.

ಪಟ್ಟಣದ ತಹಶೀಲ್ದಾರ ಕಾರ್ಯಾಲಯದಲ್ಲಿ ಶುಕ್ರವಾರ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಏಕವಲಯ ಮಹಿಳಾ ಕಬಡ್ಡಿ ಪಂದ್ಯಾವಳಿ ಅಂಗವಾಗಿ ಜರುಗಿದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

2023–24ನೇ ಸಾಲಿನಲ್ಲಿ ಪಂದ್ಯಾವಳಿ ಆಯೋಜನೆಗೆ ಅನುಮತಿ ದೊರೆತಿದೆ. ಪಂದ್ಯಾವಳಿ ಇದೇ ದಿ:16 ಗುರುವಾರದಂದು ಆರಂಭಗೊಳ್ಳಲಿದೆ. ಇದರ ಆಯೋಜನೆಗೆ ಅಗತ್ಯವಾದ ನೆರವನ್ನು ಸ್ಥಳೀಯ ಆಡಳಿತ, ವಿವಿಧ ಸಂಘ, ಸಂಸ್ಥೆಗಳು ಹಾಗೂ ಗಣ್ಯವ್ಯಕ್ತಿಗಳಿಂದ ಪಡೆದು ಯಶಸ್ವಿಗೊಳಿಸೋಣ ಎಂದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ದೈಹಿಕ ನಿರ್ದೇಶಕ ಅಶೋಕಕುಮಾರ ಜಾಧವ ಮಾತನಾಡಿ, ಕ್ರೀಡಾಳುಗಳ ವಸತಿ ಸೌಕರ್ಯ, ಸಾರಿಗೆ, ಕ್ರೀಡಾಂಗಣ ಸೇರಿದಂತೆ ಪಂದ್ಯಾವಳಿಯ ರೂಪುರೇಷೆಗಳ ಬಗ್ಗೆ ಮಾಹಿತಿ ನೀಡಿದರು.

ಕಾಲೇಜು ಪ್ರಾಂಶುಪಾಲ ಅಶೋಕ ಹೆಗಡೆ, ಅಧೀಕ್ಷಕ ಜಗನ್ನಾಥ ಸಜ್ಜನ ಉಪನ್ಯಾಸಕರುಗಳಾದ ಶಿವಪುತ್ರ ಜಾಲವಾದಿ, ಅಕ್ರಮ ಪಾಷಾ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಎಲ್.ಡಿ.ಮುಲ್ಲಾ, ಸದಸ್ಯ ರಮೇಶ ಮಸಬಿನಾಳ, ಈರಣ್ಣ ವಸ್ತ್ರದ, ಗಂಗಾಧರ ಬಬಲೇಶ್ವರ, ಮಲ್ಲನಗೌಡ ಪಾಟೀಲ, ಮುನ್ನಾ ಮಳಖೇಡ, ಮಹೇಶ ದೊಡಮನಿ, ಮಲ್ಲು ಜಮಾದಾರ, ಕಾಶೀನಾಥ ತಳಕೇರಿ, ರಮೇಶ ವ್ಯಾಗೇರಿ, ಪಿ.ಸಿ.ತಳಕೇರಿ, ಪ್ರಕಾಶ ಮಲ್ಲಾರಿ, ರಾಜು ಕಾಖಂಡಕಿ, ಶ್ರೀಕಾಂತ ಕಾಖಂಡಕಿ, ಎಸ್.ಡಿ.ರಜಪೂತ ಹಾಗೂ ಸಿಬ್ಬಂದಿ ಇದ್ದರು.

ಉದಯರಶ್ಮಿ ದಿನಪತ್ರಿಕೆ

## ಕಾವ್ಯರಶ್ಮಿ

– ವರಲಕ್ಷ್ಮೀ ಪರ್ತಜೆ
("ನಮ್ಮ ಕಥಾ ಅರಮನೆ" ಬರಹಗಾರರು)



### ಸ್ತ್ರೀ ಎಂದರೆ

ಹೆತ್ತವರ ಒಲವಿನ ಕುಡಿಯವಳು
ಪತಿಯಮುದ್ದಿನ ಮಡದಿಯವಳು


ಎರಡುಮನೆಗಳ ನಂದಾದೀಪವಾಗಿ
ಮುದ್ದು ಕಂದಮ್ಮಗಳ ಮಾತೆಯಾಗಿ

ಸುಖದುಃಖಗಳಲಿ ಸದಾ ಸಮಚಿತ್ತಳು
ಸಹನೆಯಲಿ ಭೂಮಿಯಂತೆ ಇಹಳು

ಸಭ್ಯ ಸಂಸ್ಕೃತಿಯ ಪ್ರತೀಕವಿವಳು
ಎಲ್ಲೆಡೆ ಛಾಪನ್ನು ಮೂಡಿಸುವವಳು

ಪ್ರೀತಿ ತ್ಯಾಗ ಸ್ನೇಹಕ್ಕೆ ಸಮಾನಳಿವಳು
ನವ ಸಮಾಜದ ನಿರ್ಮಾತೃ ಇವಳು

ಪ್ರಕೃತಿದೇವಿಯ ತದ್ರೂಪವೇ ಇವಳು
ಹೆಣ್ಣೆಂದರೆ ಆದಿಶಕ್ತಿಯ ಸ್ವರೂಪಳು..



# ಅನುಪಮ ಭಕ್ತೆ.. ಫಣಿಯಮ್ಮ

## ಭಾವರಶ್ಮಿ



– ವೀಣಾ ಹೇಮಂತ್ ಗೌಡ ಪಾಟೀಲ್, ಮುಂಡರಗಿ
("ನಮ್ಮ ಕಥಾ ಅರಮನೆ" ಬರಹಗಾರರು)

ಉದಯರಶ್ಮಿ ದಿನಪತ್ರಿಕೆ

ಸುಮಾರು 150 ವರ್ಷಗಳ ಹಿಂದಿನ ಮಾತಿದು. ಇಂದಿನ ಗದಗ ಜಿಲ್ಲೆಯ ರೋಣ ತಾಲೂಕಿನ ಹಾಲಕೇರಿಯ ಮಠದ ಆ ಗುರುಗಳು ಅತ್ಯಂತ ಮಹಿಮಾಣಟಿಜಜ–ಜಿಟಿಜಜನ್ವಿತರು. ಅವರನ್ನು ಗಡ್ಡದ ಅಜ್ಜ ಎಂದೇ ಜನರು ಕರೆಯುತ್ತಿದ್ದರು. ಕುದುರೆಯ ಮೇಲೆ ಹಳ್ಳವನ್ನು ದಾಟಿದ ಅವರಿಗೆ

ಬಸರಿಗಿಡದ ವೀರಪ್ಪ ಎಂಬ ಮಹಾನ್ ವ್ಯಕ್ತಿ ನಮ್ಮ ತಲೆಯ ಮೇಲಿನ ಟೋಪ್ಪಿಗೆಯನ್ನು ಕಾಣಿಕೆಯಾಗಿ ನೀಡಿ ಭವದ ನಿಜವಾದ ವಿರಕ್ತ ಸ್ವಾಮಿ ಎಂದು ಕರೆದಿದ್ದರು. ಸ್ವಾತಂತ್ರ್ಯ ಪೂರ್ವದಲ್ಲಿಯೇ ಶಿಕ್ಷಣ ಪ್ರಸಾರಕ್ಕಾಗಿ ಕಾರ್ಯನಿರ್ವಹಿಸಿದ್ದ ಸ್ವಾಮಿಗಳು ಭಕ್ತರ ಮನದಲ್ಲಿ ವಿಶೇಷ ಸ್ಥಾನ ಗಳಿಸಿದ್ದರು.

ಆ ಹಾಲಕೇರಿ ಊರಿನ ಗೌಡರ ಮನೆತನದ ಸೊಸೆ ಫಣಿಯಮ್ಮ ತಾನು ಮದುವೆಯಾಗಿ ಹಾಲಕೇರಿಗೆ ಬಂದಾಗಿನಿಂದಲೂ ಪ್ರತಿದಿನ ನಿತ್ಯವಿಧಿಗಳನ್ನು ಪೂರೈಸಿ ಸ್ನಾನ ಪೂಜೆಗಳನ್ನು ನೆರವೇರಿಸಿ ಮಠಕ್ಕೆ ಬಂದು ಗದ್ದುಗೆಗೆ ನಮಸ್ಕರಿಸಿ ನಂತರ ಗಡ್ಡದ ಅಜ್ಜ ಎಂದು ಕರೆಯಲ್ಪಡುವ ಗುರುಗಳ ಪಾದೋದಕ ಪ್ರಸಾದವನ್ನು ಸೇವಿಸಿಯೇ ಆಹಾರ ಸೇವಿಸುವ ಕ್ರಮವನ್ನು ಪಾಲಿಸುತ್ತಿದ್ದಳು. ದಶಕಗಳ ಕಾಲ ಇದು ಹೀಗೆಯೇ ನಡೆದಿತ್ತು.

ಒಂದು ದಿನ ಎಂದಿನಂತೆ ಗದ್ದುಗೆಯ ದರ್ಶನ ಮಾಡಿ ನಮಸ್ಕರಿಸಿ ಅಜ್ಜನವರ ಪಾದೋದಕ ಪ್ರಸಾದಕ್ಕಾಗಿ ಕಲ್ಮಠಕ್ಕೆ ಬಂದಳು ವೃದ್ಧ ಫಣಿಯಮ್ಮ. ಆದರೆ ಲಿಂಗ ಪೂಜಾನುಷ್ಠರಾಗಿ ಧ್ಯಾನಮಗ್ನರಾದ ಗಡ್ಡದ ಅಜ್ಜನವರು ಹೊರಗೆ ಬರಲೇ ಇಲ್ಲ. ಅದೆಷ್ಟೇ ಹೊತ್ತಾದರೂ ಪಣಿಯಮ್ಮ ಅಜ್ಜಿ ಮನೆಗೆ ಬಾರದೆ ಹೋದದ್ದನ್ನು ಕಂಡು ಮನೆಯ ಜನರೆಲ್ಲ ಆಕೆಯನ್ನು ಕರೆಯಲು ಬಂದರು. ಆದರೆ ಚಾಚು ತಪ್ಪದೇ ತನ್ನ ನಿಯಮವನ್ನು ಪಾಲಿಸುತ್ತಿದ್ದ ಫಣಿಯಮ್ಮ ಅಜ್ಜನವರ ಪಾದೋದಕ ಪ್ರಸಾದವಿಲ್ಲದೆ ಮನೆಗೆ ಮರಳಲು ನಿರಾಕರಿಸಿ ಕಲ್ಮಠದ ತಲೆ ಬಾಗಿಲಿನಲ್ಲಿ ಕುಳಿತುಬಿಟ್ಟಳು. ದಿನಗಳು ಕಳೆದವು. ಪಣಿಯಮ್ಮ ಆಹಾರ ನೀರು ಸೇವಿಸದೆ ಕುಳಿತಲ್ಲಿಯೇ ಕುಳಿತಳು. ಗುರುಗಳು ಪೂಜಾ ಮಗ್ನರಾಗಿ ಕುಳಿತಾಗ ಅವರ ಕೋಣೆಯೊಳಗೆ ಯಾರೂ ಅತಿಕ್ರಮ ಪ್ರವೇಶ ಮಾಡುವುದಿಲ್ಲ ಎಂಬ ನಿಯಮವಿರುತ್ತದೆ. ಆದರೆ ಫಣಿಯಮ್ಮನ ನಿತ್ರಾಣ ಸ್ಥಿತಿಯನ್ನು ಕಂಡು ಅಜ್ಜಾವರನ್ನು ಧ್ಯಾನ ಸ್ಥಿತಿಯಿಂದ ಎಬ್ಬಿಸಲು ಬಾಗಿಲಿನ ಅಗಳಿಯನ್ನು ಹಲವಾರು ಬಾರಿ ಬಾರಿಸಿದರು. ಪ್ರಯೋಜನವೇನೂ ಆಗಲಿಲ್ಲ.

ಕೊನೆಗೆ ಊರಿನ ಜನರೆಲ್ಲ ಸೇರಿ ಭಜನೆ, ಗಾಯನ ಮಾಡಲು ಪ್ರಾರಂಭಿಸಿದರು. ಹಾರ್ಮೋನಿಯಂ, ತಬಲಾ ಗಳ ಸದ್ದು, ಹಾಡುಗಳ ಗೌಜಿ ಯಾವುದೂ ಗುರುಗಳ ಕಿವಿಗೆ ತಟ್ಟಲೆ ಇಲ್ಲ.ಹೀಗೆಯೇ ಸುಮಾರು 18 ದಿನ ಕಳೆಯಿತು.

ಒಳಗೆ ಪೂಜಾ ನಿರತರಾಗಿದ್ದ ಗುರುಗಳಿಗೆ ಲಿಂಗಧಾರಿ ಶಿವನು ಮಾತನಾಡಿಸಿದಂತೆ "ನೀನು ನನ್ನ ಧ್ಯಾನದಲ್ಲಿ ಕುಳಿತಿರುವೆ, ಆದರೆ ಮಠದ ಹೊರ ಭಾಗದಲ್ಲಿ ನಿನ್ನ ಧ್ಯಾನದಲ್ಲಿ ಕುಳಿತ ಆ ಮಹಾಸಾಧ್ವಿ ಹೆಣ್ಣು ಮಗಳಿಗೆ ದರ್ಶನ ನೀಡು" ಎಂದಂತೆ ಭಾಸವಾಗಿ ಧ್ಯಾನದಿಂದ ಬಹಿರ್ಮುಖರಾಗಿ ಎಚ್ಚೆತ್ತರು. ಕೋಣೆಯಿಂದ ಹೊರಬಂದು ಈಗಾಗಲೇ ಬಳಕೆಯಿಂದ ನಿತ್ರಾಣಳಾಗಿದ್ದ ಫಣಿಯಮ್ಮನಿಗೆ ಪಾದೋದಕ ಪ್ರಸಾದವನ್ನು ನೀಡಿದರು.

ಆಕೆಯ ಭಕ್ತಿಯನ್ನು ಮೆಚ್ಚಿ ಏನನ್ನಾದರೂ ಕೇಳಿಕೊಳ್ಳಲು ಹೇಳಿದರು. ಚೇತರಿಸಿಕೊಂಡ ಅಜ್ಜಿ "ಯಪ್ಪಾ, ಕೊಡಾಕ ನೀ ಯಾರು?? ತೋಗೊಳ್ಳಾಕ ನಾ ಯಾರು?? ಆದ್ರ ಕೊಟ್ಟ ಮಾತನ್ನು ತಪ್ಪದೇ ನಡೆಸುವ ಮಾತು ಕೊಡುವುದಾದರೆ ಮಾತ್ರ ತನ್ನ ಕೋರಿಕೆಯನ್ನು ಹೇಳುವೆ" ಎಂದಳು. ಇದಕ್ಕೆ ಒಪ್ಪಿದ ಗುರುಗಳು ಅದೆಷ್ಟೇ ತೊಂದರೆಗಳು ಬಂದರೂ ಆಕೆಗೆ ಕೊಟ್ಟ ಮಾತನ್ನು ಈಡೇರಿಸುವೆ ಎಂದು ಭರವಸೆ ನೀಡಿದರು. ಆಗ ಫಣಿಯಮ್ಮ ತನ್ನ ಜೀವಿತದ ಕೊನೆಯ ಗಳಿಗೆಯಲ್ಲಿ ಪಾದೋದಕ ಪ್ರಸಾದವನ್ನು ನೀಡಿ ತನ್ನನ್ನು ಈ ಲೋಕದ ಬಂಧನದಿಂದ ಬಿಡುಗಡೆಗೊಳಿಸಬೇಕು ಎಂದು ಬೇಡಿಕೊಂಡಳು. ಇದಕ್ಕೆ ಗುರುಗಳು ಅಸ್ತು ಎಂದು ಮಾತು ಕೊಟ್ಟರು.



ಮುಂದೆ ಗುರುಗಳು ಕೆಲ ವರುಷಗಳ ನಂತರ ತಮ್ಮ ಕೆಲ ಭಕ್ತರೊಂದಿಗೆ ಕಾಶಿಗೆ ಪಯಣ ಬೆಳೆಸಿದರು. ಕಾಶಿಯಿಂದ ಹಿಮಾಲಯದತ್ತ ನಡೆದ ಅವರು ಹಲವಾರು ದೇಗುಲಗಳ ದರ್ಶನ ಮಾಡಿದರು. ನಂತರ ಹಿಮಾಲಯದ ಕಡು ಚಳಿಯನ್ನು ತಡೆಯಲಾರದ ತಮ್ಮ ಭಕ್ತ ಗಣವನ್ನು ಮರಳಿ ಹಾಲಕೇರಿಗೆ ಕಳುಹಿಸಿದರು.

ಹೀಗೆಯೇ ಮೂರು ವರ್ಷ ಗತಿಸಿ ಹೋಯಿತು. ಪಯಣವನ್ನು ಮುಂದುವರಿಸಿದ ಗುರುಗಳು ಗೌರಿಶಂಕರ ಪರ್ವತದವರೆಗಿನ ಎಲ್ಲಾ ದೇಗುಲಗಳ ದರ್ಶನ ಮಾಡಿದರು. ಇನ್ನೇನು ಹಿಮಾಲಯದ ಆ ಧವಳಗಿರಿಯನ್ನು, ಕೈಲಾಸ ಪರ್ವತವನ್ನು ಸಂದರ್ಶಿಸಬೇಕು ಎಂಬ ಧಾವಂತದಲ್ಲಿರುವಾಗಲೇ ಅವರ ದಿವ್ಯದೃಷ್ಟಿಗೆ ಫಣಿಯಮ್ಮ ತನ್ನ ಕೊನೆಯ ಗಳಿಗೆಗಳನ್ನು ಎಣಿಸುತ್ತಿರುವುದು ಗೋಚರಿಸಿತು. ಜೊತೆಗೆ ತಾವು ಕೊಟ್ಟ ಮಾತು ಕೂಡ ನೆನಪಾಯಿತು. ಅಂತೆಯೇ ತಮ್ಮ ಸೇವಾ ಮರಿಯನ್ನು ಕರೆದು ಮರಳಿ ಹೊರಡಲು ತಯಾರಾದರು.

ಪಯಣ ಮುಂದುವರಿಸಿ ಬಾಗಲಕೋಟೆಯ ಗಂಜಿಹಾಳ ಗ್ರಾಮಕ್ಕೆ ಬಂದಿಳಿದ ಗುರುಗಳು ತಾವು ಮರುದಿನ ಹಾಲಕೇರಿಗೆ ಬರುವುದಾಗಿ ಸುದ್ದಿ ಕಳುಹಿಸಿದರು. ಮೂರು ವರ್ಷಗಳ ನಂತರ ಊರಿನ ದೈವ ಮರಳಿ ಊರು ಸೇರುತಿದೆ ಎಂದು ಸಂಭ್ರಮ ಸಂತಸ ಊರಿನ ಜನರಲ್ಲಿ ಮನೆ ಮಾಡಿತು. ಮನೆ ಮನೆಗಳಲ್ಲಿ ತಳಿರು ತೋರಣಗಳನ್ನು ಕಟ್ಟಿ ಹಬ್ಬದ ವಾತಾವರಣವೇ ಸೃಷ್ಟಿಯಾಯಿತು. ಹಾಲಕೇರಿಗೆ ಬಂದ ಗುರುಗಳು ಮಠಕ್ಕೆ ಹೋಗದೆ ಸೀದಾ ಫಣಿಯಮ್ಮನ ನಿವಾಸಕ್ಕೆ ಆಗಮಿಸಿದರು. ಗುರುಗಳ ಧ್ವನಿಯನ್ನು ಆಲಿಸಿದ ಕೂಡಲೇ ಈಗಾಗಲೇ ಅರೆಪ್ರಜ್ಞಾವಸ್ಥೆಯಲ್ಲಿದ್ದ ಫಣಿಯಮ್ಮ ನಿಧಾನವಾಗಿ ಕಣ್ಣು ತೆರೆದು ಗುರುಗಳನ್ನು ಕುರಿತು ಎಪ್ಪ ..

ಜಳಕ ಪೂಜಾ ಮಾಡಿ, ನನಗ ಪಾದೋದಕ ಪ್ರಸಾದವನ್ನು ನೀಡಿ ಕಳುಹಿಸಿಕೊಡು ಎಂದು ಆಗ್ರಹಿಸಿದಳು. ನಿನ್ನ ಕಳಿಸಿಕೊಡಾಕ್ ಅಂತನ ಮೂರು ತಿಂಗಳ ಪ್ರಯಾಣ ಮಾಡಿ ಬಂದೀನವ್ವ ಎಂದು ಹೇಳಿದರು. ಅಂತೆಯೇ ಗುರುಗಳು ಅವರ ಮನೆಯಲ್ಲಿಯೇ ಸ್ನಾನ ಮಾಡಿ, ಪೂಜೆ ಸಲ್ಲಿಸಿ ತಮ್ಮ ಪಾದೋದಕ ಪ್ರಸಾದವನ್ನು ಫಣಿಯಮ್ಮನಿಗೆ ನೀಡಿದಾಗ ಅದನ್ನು ಸೇವಿಸಿದ ಆಕೆ ತೃಪ್ತಿಯಿಂದ ಕಣ್ಣುಮುಚ್ಚಿದಳು. ಆಕೆಯ ಕೊನೆಯುಸಿರು ಪಂಚಭೂತಗಳಲ್ಲಿ ಲೀನವಾಯಿತು.

ಇಂದಿಗೂ ನಾವು ಹಾಲಕೇರಿಯ ಮಠದ ಆವರಣದಲ್ಲಿ ಭಕ್ತ ಫಣಿಯಮ್ಮನ ಸಮಾಧಿಯನ್ನು ನೋಡಬಹುದು. ಈ ಫಣಿಯಮ್ಮನ ವಂಶಜರು ಇಂದಿಗೂ ಹಾಲಕೇರಿಯಲ್ಲಿದ್ದಾರೆ . ಗುರು ಶಿಷ್ಯರ ಸಂಬಂಧ ತಂದೆ ಮಕ್ಕಳ ಸಂಬಂಧದಂತೆ ಅವಿನಾಭಾವವಾದದ್ದು, ಉಪಮಾತೀತವಾದದ್ದು. ಇಂದಿಗೂ ನಮ್ಮ ವಾಗ್ಮಿಗಳು, ಪ್ರವಚನಕಾರರು ತಮ್ಮ ಪ್ರವಚನಗಳಲ್ಲಿ ಅನುಪಮ ಶರಣ ಭಕ್ತ ಫಣಿಯಮ್ಮನನ್ನು ನೆನೆಯುತ್ತಾರೆ. ಹಾಲಕೇರಿ ಮಠದ ಪುರಾಣದಲ್ಲಿ ಫಣಿಯಮ್ಮನ ಭಕ್ತಿಯ ಕುರಿತ ಕಥೆ–'ಯೇ ಇದೆ. ಇಂದಿಗೂ ಜನರು ಆಕೆಗೆ ಪೂಜೆಯನ್ನು ಸಲ್ಲಿಸುತ್ತಾರೆ. ಸಂಸಾರದಲ್ಲಿ ಇದ್ದುಕೊಂಡು, ಭವದಲ್ಲಿ ಬದುಕಿ ಭಕ್ತಳಾದ ಫಣಿಯಮ್ಮನಿಗೆ ಸಾವಿರದ ಶರಣು